ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಕನ್ನಡ ಮಾಸಪತ್ರಿಕೆ

# ಸಹಕಾರ

ಮಾಸಪತ್ರಿಕೆ

ಸಂಪುಟ : 6 । ಸಂಚಿಕೆ : 1 । ಜನವರಿ - 2024 । ಪುಟಗಳು : 20 । ಬೆಲೆ : 25/-

ಕರ್ನಾಟಕ ರಾಜ್ಯ
ಸಹಕಾರ ಪತ್ತಿನ ಸಂಘಗಳ
ಮಹಾಮಂಡಳದ ಪ್ರಕಟಣೆ



ವಿ. ರಾಜು
ಅಧ್ಯಕ್ಷರು

## ಸಮಸ್ತ ಸಹಕಾರಿ ಬಂಧುಗಳಿಗೆ
## 2024
## ಹೊಸ ವರ್ಷ, ಸಂಕ್ರಾಂತಿ ಹಾಗೂ ಗಣರಾಜ್ಯೋತ್ಸವದ ಶುಭಾಶಯಗಳು



ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ
ಉಪಾಧ್ಯಕ್ಷರು

ಹಾಗೂ ಆಡಳಿತ ಮಂಡಳಿ ಸದಸ್ಯರು
ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು.



ಜನವರಿ 15, ಸಂಕ್ರಾಂತಿ



ಜನವರಿ 26, ಗಣರಾಜ್ಯೋತ್ಸವ



ಪತ್ತಿನ ಸಹಕಾರ ಸಂಘಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವಂತೆ ರಾಜ್ಯ ಪತ್ತಿನ ಸಹಕಾರ ಮಹಾಮಂಡಳದ ಪದಾಧಿಕಾರಿಗಳು ಕೇಂದ್ರ ಸಹಾಯಕ ಸಚಿವ ಶ್ರೀ ಕರಾಡ್ ಅವರಿಗೆ ಮನವಿ ಸಲ್ಲಿಸಿದರು.



ನವದೆಹಲಿಯಲ್ಲಿ ಡಿಸೆಂಬರ್‌ನಲ್ಲಿ ನಡೆದ ಪತ್ತಿನ ಸಹಕಾರ ಸಂಘಗಳ ಸಮಾವೇಶದಲ್ಲಿ ಕರ್ನಾಟಕ ರಾಜ್ಯದ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಆಡಳಿತ ಮಂಡಳಿ ಸದಸ್ಯರುಗಳು ಮಹಾರಾಷ್ಟ್ರ ರಾಜ್ಯದ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ಆಡಳಿತ ಮಂಡಳಿ ಸದಸ್ಯರುಗಳೊಂದಿಗೆ ಪತ್ತಿನ ಸಹಕಾರ ಸಂಘಗಳ ಬೆಳವಣಿಗೆಯ ಕುರಿತು ವಿಚಾರ ವಿನಿಮಯ ನಡೆಸಿದರು.




ನವದೆಹಲಿಯಲ್ಲಿ ಡಿಸೆಂಬರ್‌ನಲ್ಲಿ ನಡೆದ ಪತ್ತಿನ ಸಹಕಾರ ಸಂಘಗಳ ಸಮಾವೇಶದಲ್ಲಿ ಕರ್ನಾಟಕ ರಾಜ್ಯದ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಆಡಳಿತ ಮಂಡಳಿ ಸದಸ್ಯರುಗಳು ಕೇಂದ್ರ ಸರ್ಕಾರದ ಆದಾಯ ತೆರಿಗೆ ಇಲಾಖೆ (ಸಿಬಿಡಿಟಿ)ಯ ಹೆಚ್ಚುವರಿ ಆಯುಕ್ತ ಶ್ರೀ ಸಿನ್ಹಾ ಅವರನ್ನು ಭೇಟಿಮಾಡಿ ಪತ್ತಿನ ಸಹಕಾರ ಸಂಘಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರಗಳನ್ನು ದೊರಕಿಸಿಕೊಡುವಂತೆ ಚರ್ಚಿಸಿದರು.

# ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ.,

ನಂ.32 , 3ನೇ ಮಹಡಿ, ಡಿ. ದೇವರಾಜ ಅರಸ್ ರಸ್ತೆ (ರೇಸ್ ಕೋರ್ಸ್ ರಸ್ತೆ)
ಬೆಂಗಳೂರು–560001 ದೂರವಾಣಿ–080–22268018/19

ಸಂಖ್ಯೆ:ಶಾವಿ/9/2023–24 ದಿನಾಂಕ:23.11.2023

## ಡಿಪ್ಲೊಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ (ಡಿ.ಸಿ.ಎಂ) ತರಬೇತಿಗೆ ಅರ್ಜಿ ಆಹ್ವಾನ

ಪ್ರವೇಶ
ದಿ:01.01.2024
ಪ್ರಾರಂಭ

**ಕರ್ನಾಟಕದಾದ್ಯಂತ 8 ತರಬೇತಿ ಕೇಂದ್ರಗಳ ಮೂಲಕ ತರಬೇತಿ**

**2024-2025** (ಜನವರಿ–ಜೂನ್)

### ದೂರ ಶಿಕ್ಷಣ ಡಿ.ಸಿ.ಎಂ ಕೋರ್ಸ್

(ಸಹಕಾರ ಸಂಘ / ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ ಮಾತ್ರ)

**ಕೋರ್ಸ್ ಅವಧಿ: 6 ತಿಂಗಳು**

- ಸಂಪರ್ಕ ರಹಿತ ಕೋರ್ಸ್ ಪ್ರವೇಶಕ್ಕೆ ಅವಕಾಶ.
- ಅಧ್ಯಯನ ಸಾಹಿತ್ಯ ನೀಡಲಾಗುವುದು.
- 10 ದಿನಗಳ ಸಂಪರ್ಕ ತರಗತಿಗಳು.
- ಪದೋನ್ನತಿ ಹಾಗೂ ವಾರ್ಷಿಕ ಬಡ್ತಿಗೆ ಉಪಯುಕ್ತ.
- “ಈಗಾಗಲೇ ರಾಜ್ಯದಲ್ಲಿ ಸುಮಾರು 30000 ಸಹಕಾರಿ ಉದ್ಯೋಗಿಗಳು ತರಬೇತಿಯ ಪಡೆದಿದ್ದಾರೆ, ಸಹಕಾರ ಕ್ಷೇತ್ರದ ಬಗ್ಗೆ ಅರಿವಿಗಾಗಿ ನಿಮಗೀಗ ಸುವರ್ಣಾವಕಾಶ”
- ಅರ್ಜಿಗಳನ್ನು ತರಬೇತಿ ಸಂಸ್ಥೆಗಳಲ್ಲಿ ಅಥವಾ ಆನ್‌ಲೈನ್ ಮೂಲಕ ಸಹ ಸಲ್ಲಿಸಬಹುದಾಗದೆ.

**ತರಬೇತಿ ನೀಡುವ 8 ಕೆ.ಐ.ಸಿ.ಎಂ ಕೇಂದ್ರಗಳು**

ಧಾರವಾಡ
ಮಡಿಕೇರಿ
ಮೈಸೂರು
ಕಲಬುರಗಿ
ಬೆಂಗಳೂರು
ಶಿವಮೊಗ್ಗ
ಮೂಡುಬಿದಿರೆ
ಬೆಳಗಾವಿ

ಆನ್‌ಲೈನ್ ಪ್ರವೇಶಾತಿಯ ಲಿಂಕ್: www.kscfdcm.co.in

ಸಹಿ/–
ವ್ಯವಸ್ಥಾಪಕ ನಿರ್ದೇಶಕರು

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:**

| | | | |
|---|---|---|---|
| ಧಾರವಾಡ: | 0836–2442349/8317383188 | ಮಡಿಕೇರಿ: | 0827–2228437/9845318364 |
| ಮೈಸೂರು: | 0821–2520563/9141574147 | ಕಲಬುರಗಿ: | 0847–2245340/9916726886 |
| ಬೆಂಗಳೂರು: | 080–26602046/9902189872 | ಶಿವಮೊಗ್ಗ: | 0818–2248873/7022429440 |
| ಮೂಡುಬಿದಿರೆ: | 08258–236561/9449075746 | ಬೆಳಗಾವಿ: | 0831–2466317/9449007661 |

## ಸಂಪಾದಕೀಯ



ವಿ. ರಾಜು
ಅಧ್ಯಕ್ಷರು

**ಪ್ರಾಕೃತಿಕ ಅತಿವೃಷ್ಠಿ – ಅನಾವೃಷ್ಠಿಗಳಿಂದ ಪ್ರದೇಶವಾರು ಸಮಸ್ಯೆಗಳಿದ್ದರೂ ಸಹಕಾರ ಸಂಸ್ಥೆಗಳು ತತ್ವ ಆಧಾರಿತ ಸೇವೆಗಳಿಂದ ಜನರಿಗೆ ಹತ್ತಿರವಾಗಿದೆ. ಗ್ರಾಮೀಣ ಜನರು 2023ರ ವರ್ಷದಲ್ಲಿ ಹಲವು ಬಗೆಯ ಸಮಸ್ಯೆಗಳನ್ನು ಎದುರಿಸುತ್ತಿದ್ದರೂ ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಹಲವು ಯೋಜನೆಗಳು ಅವರಲ್ಲಿ ಆತ್ಮಸ್ಥೈರ್ಯವನ್ನು ತುಂಬಿರುವುದು ಕಂಡು ಬರುತ್ತದೆ.**

# 2024ರ ವರ್ಷಾರಂಭ ಸಹಕಾರ ಸಮೃದ್ಧಿಯ ಸಂಕಲ್ಪವಿರಲಿ




ರಾಜ್ಯದ ಎಲ್ಲಾ ಸಹಕಾರಿ ಬಂಧುಗಳಿಗೆ 2024ರ ವರ್ಷದ ಹಾರ್ದಿಕ ಶುಭಾಷಯಗಳು. 2024ರ ವರ್ಷವನ್ನು ಅವಲೋಕಿಸಿದಾಗ ರಾಷ್ಟ್ರ–ರಾಜ್ಯದಲ್ಲಿ ಸಹಕಾರ ಕ್ಷೇತ್ರದಲ್ಲಿ ಹಲವು ಅಭಿವೃದ್ಧಿಯ ವಿಶೇಷತೆಗಳನ್ನು ಗಮನಿಸಬಹುದು. ಸಹಕಾರ ಸಂಸ್ಥೆಗಳು ಸದಸ್ಯ ಸೇವೆಗಳೊಂದಿಗೆ ಕ್ರಿಯಾಶೀಲವಾಗಿ ತೊಡಗಿಸಿಕೊಂಡು ಬರದ ಛಾಯೆಯಲ್ಲೂ ಸಮಾದಾನಕರ ಸೇವೆ ಸಲ್ಲಿಸುತ್ತಾ ಅವರುಗಳು ಆರ್ಥಿಕ ಅಗತ್ಯಗಳನ್ನು ಪೂರೈಸುವಲ್ಲಿ ಸಫಲವಾಗಿದೆ ಎಂದೇ ಭಾವಿಸಲಾಗಿದೆ.

ಪ್ರಾಕೃತಿಕ ಅತಿವೃಷ್ಠಿ–ಅನಾವೃಷ್ಠಿಗಳಿಂದ ಪ್ರದೇಶವಾರು ಸಮಸ್ಯೆಗಳಿದ್ದರೂ ಸಹಕಾರ ಸಂಸ್ಥೆಗಳು ತತ್ವ ಆಧಾರಿತ ಸೇವೆಗಳಿಂದ ಜನರಿಗೆ ಹತ್ತಿರವಾಗಿದೆ. ಗ್ರಾಮೀಣ ಜನರು 2023ರ ವರ್ಷದಲ್ಲಿ ಹಲವು ಬಗೆಯ ಸಮಸ್ಯೆಗಳನ್ನು ಎದುರಿಸುತ್ತಿದ್ದರೂ ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಹಲವು ಯೋಜನೆಗಳು ಅವರಲ್ಲಿ ಆತ್ಮಸ್ಥೈರ್ಯವನ್ನು ತುಂಬಿರುವುದು ಕಂಡು ಬರುತ್ತದೆ.

2024ರ ವರ್ಷದಲ್ಲಿ ಉತ್ತಮ ಮಳೆಯಾದರೆ, ಗ್ರಾಮೀಣ ಜನರ ಬದುಕು ಹಸನಾಗುತ್ತದೆ. ಆರ್ಥಿಕ–ಸಾಮಾಜಿಕ ಪ್ರಗತಿಗೆ ಪ್ರಕೃತಿಯ ಕೊಡುಗೆಯೂ ವರದಾನವಾಗಲಿದೆ.

ರಾಜ್ಯದ ಆರೂವರೆ ಕೋಟಿ ಜನಸಂಖ್ಯೆಗೆ ಹೋಲಿಕೆ ಮಾಡಿದಾಗ ಹೆಚ್ಚು ಹೆಚ್ಚು ಜನರು ಸಹಕಾರ ಸಂಘಗಳಲ್ಲಿ ಸದಸ್ಯರಾಗಿ ಈ ಕ್ಷೇತ್ರದಲ್ಲಿ ದೊರೆಯುವ ಸೌಲಭ್ಯಗಳನ್ನೂ ಪಡೆಯುವಂತಾಗಬೇಕು. ಸಹಕಾರ ಸಂಘಗಳೂ ಸಹ ಹೆಚ್ಚು ಸದಸ್ಯ ಸೇವೆಗಳಲ್ಲಿ ತೊಡಗಿಸಿಕೊಂಡು ಸಹಕಾರದಿಂದ ಸಮೃದ್ದಿ ಎಂಬ ಆಶಯದೊಂದಿಗೆ ಸಂಕಲ್ಪ ಮಾಡಿ ಗುಣಮಟ್ಟದ ಸೇವೆ ನೀಡಲಿ ಎಂದು ಆಶಿಸೋಣ.

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

ಸಹಕಾರ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು**

ನಂ. 16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್‌ರಸ್ತೆ,
ಮಲ್ಲೇಶ್ವರಂ, ಬೆಂಗಳೂರು – 560003
ದೂರವಾಣಿ ಸಂಖ್ಯೆ :
080–23564444 / 23464033 / 23464034
ಇ–ಮೇಲ್ : info@ksccsf.org
ksccsfltd@gmail.com, ವೆಬ್ : www.ksccsf.org

**ಸಂಪಾದಕ ಮಂಡಳಿ**

ಅಧ್ಯಕ್ಷರು / ಪ್ರಧಾನ ಸಂಪಾದಕರು :
**ಶ್ರೀ ವಿ. ರಾಜು**

ಕಾರ್ಯನಿರ್ವಾಹಕ ಸಂಪಾದಕರು:
**ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ**

ಸದಸ್ಯರು :
**ಶ್ರೀ ಕೆ. ಕೃಷ್ಣಮೂರ್ತಿ, ಶ್ರೀ ಜಿ. ಮಲ್ಲಿಕಾರ್ಜುನಯ್ಯ**
**ಶ್ರೀ ಹೆಚ್.ಟಿ. ನಾಗೇಶ್, ಶ್ರೀ ಚಿತ್ತರಂಜನ್ ಬೋಳಾರ್**

ಸಂಪಾದಕರು :
**ಪ್ರಜ್ವಲ್ ಕೆ.ಎನ್.**
ಮುಖ್ಯಕಾರ್ಯನಿರ್ವಹಣಾಧಿಕಾರಿ

## ಸಹಕಾರ ಸಂಘಕ್ಕೆ ಭೇಟಿ – ಅಭಿನಂದನೆ ಸಲ್ಲಿಕೆ



ಕರ್ನಾಟಕ ರಾಜ್ಯ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ ವಿ. ರಾಜು ಅವರು ಇತ್ತೀಚೆಗೆ ಶಿವಮೊಗ್ಗದ ಮಲೆನಾಡು ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಗೆ ನೀಡಿದ ಸಂದರ್ಭದಲ್ಲಿ ಸಂಘದ ಅಧ್ಯಕ್ಷರಾದ ಕೆ.ಎನ್. ರಾಮಕೃಷ್ಣರವರು ಶ್ರೀಯುತರನ್ನು ಸನ್ಮಾನಿಸಿ, ಗೌರವಿಸಿದರು. ಈ ಸಂದರ್ಭದಲ್ಲಿ ಸಂಘದ ಆಡಳಿತಮಂಡಳಿ ಸದಸ್ಯರುಗಳು ಉಪಸ್ಥಿತರಿದ್ದರು.

**ಸುಭಾಷಿತ :** "ಶಾಸ್ತ್ರದಲ್ಲಿ ದೋಷವಿದ್ದರೆ ಹೃದಯದಲ್ಲಿ ತಿದ್ದಬಹುದು, ಹೃದಯದಲ್ಲಿ ದೋಷವಿದ್ದರೆ ಶಾಸ್ತ್ರ ಏನು ಮಾಡುವುದು?"
– ದತ್ತಾತ್ರೇಯ ರಾಮಚಂದ್ರ ಬೇಂದ್ರೆ

ಸಹಕಾರ ವಾರ್ತಾ ಪತ್ರಿಕೆ ಚಂದಾದಾರರಾಗ ಬಯಸುವವರು ಚಂದಾ ಹಣವನ್ನು "ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು" ಇವರ ಹೆಸರಿಗೆ ಚೆಕ್ ಅಥವಾ ಡಿಡಿಯನ್ನು ಬರೆದು ಕಳುಹಿಸಬೇಕಾಗಿ ವಿನಂತಿ. - ಸಿ.ಇ.ಒ.
ಐದು ವರ್ಷಗಳ ಚಂದಾ: ರೂ : 1770/-

ಸೂಚನೆ :
ಈ ಪತ್ರಿಕೆಯಲ್ಲಿ ಪ್ರಕಟವಾಗುವ ಲೇಖನಗಳಲ್ಲಿನ ಅನಿಸಿಕೆ, ಅಭಿಪ್ರಾಯಗಳು ಆಯಾ ಬರಹಗಾರರದೇ ಆಗಿರುತ್ತದೆ ವಿನಃ ಪತ್ರಿಕೆ / ಮಹಾಮಂಡಳದ ವಿಚಾರಗಳಾಗಿರುವುದಿಲ್ಲ.
- ಸಂಪಾದಕರು,
ಸಹಕಾರ ವಾರ್ತಾ ಪತ್ರಿಕೆ.

# ಸಹಕಾರ ಕ್ಷೇತ್ರಕ್ಕೆ ಕಾಯಕಲ್ಪ ನೀಡಿದ ಕೇಂದ್ರ ಸರ್ಕಾರ – ಸಂಸದ ಪಿ.ಸಿ. ಗದ್ದಿಗೌಡರ



**ಬಾದಾಮಿ :** ಕೇಂದ್ರ ಸರಕಾರ ಇದೇ ಮೊದಲ ಬಾರಿಗೆ ಸಹಕಾರ ಕ್ಷೇತ್ರಕ್ಕೆ ಕಾಯಕಲ್ಪ ನೀಡಿದೆ ಎಂದು ಬಾಗಲಕೋಟೆ ಸಂಸದರಾದ ಪಿ.ಸಿ.ಗದ್ದಿಗೌಡರ ಹೇಳಿದರು. ಬಾಗಲಕೋಟೆ ಜಿಲ್ಲೆಯ ಬಾದಾಮಿಯಲ್ಲಿ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಇದರ ವತಿಯಿಂದ ಕಲಬುರ್ಗಿ ವಿಭಾಗ ವ್ಯಾಪ್ತಿಗೊಳಪಡುವ ಪತ್ತಿನ ಸಹಕಾರ ಸಂಘಗಳಿಗೆ ಒಂದು ದಿನದ ಶೈಕ್ಷಣಿಕ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಪತ್ತಿನ ಸಹಕಾರ ಸಂಘಗಳು, ಕೃಷಿ ಪತ್ತಿನ ಸಹಕಾರ ಸಂಘಗಳ ಕಾರ್ಯ ಶ್ಲಾಘನೀಯವಾಗಿದೆ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಹಾಗೂ ಬಾಗಲಕೋಟೆ ಜಿಲ್ಲಾ ಸಹಕಾರ ಯೂನಿಯನ್ ಹಮ್ಮಿಕೊಂಡಿರುವ ಈ ಶೈಕ್ಷಣಿಕ ಕಾರ್ಯಗಾರದ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ಅಜಯಕುಮಾರ ಸರನಾಯಕ ಅವರು ಮಾತನಾಡಿ, ಪತ್ತಿನ ಸಹಕಾರ ಸಂಘಗಳು ಹಣವನ್ನು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನಲ್ಲಿ ಠೇವಣಿ ರೂಪದಲ್ಲಿ ಇರಿಸಲು ಅವರು ಮನವಿ ಮಾಡಿದರು.

ಪತ್ತಿನ ಮಹಾಮಂಡಳದ ಅಧ್ಯಕ್ಷರಾದ ಶ್ರೀ ವಿ.ರಾಜುರವರು ಮಾತನಾಡಿ ರಾಜ್ಯದಲ್ಲಿ ಪತ್ತಿನ ಸಹಕಾರ ಸಂಘಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಈಗಾಗಲೇ ಪತ್ತಿನ ಮಹಾಮಂಡಳವು ಕೇಂದ್ರ ಹಾಗೂ ರಾಜ್ಯ ಸರಕಾರಕ್ಕೆ ಮನವಿಯನ್ನು ಸಲ್ಲಿಸಿದ್ದು ಅದರಂತೆ ಆದಾಯ ತೆರಿಗೆಯಲ್ಲಿ ಪತ್ತಿನ ಸಹಕಾರ ಸಂಘಗಳಿಗೆ ಕೆಲವು ಸುಧಾರಣೆಯನ್ನು ಉಂಟು ಮಾಡಿದೆ ಎಂದರು.

ಈ ಸಂದರ್ಭದಲ್ಲಿ ಪತ್ತಿನ ಮಹಾಮಂಡಳದ ನಿರ್ದೇಶಕರುಗಳಾದ ರವೀಂದ್ರ ಪ್ರ. ಕಲಬುರ್ಗಿ, ಶೇಖರ ಗೌಡ ಮಾಲಿಪಾಟೀಲ, ಸಿ.ಎಂ. ಮಾರೇಗೌಡ, ಡಾ. ಸಂಜಯ್ ಪಂ. ಹೊಸಮಠ, ಎಂ.ಜೆ. ನರೇಂದ್ರ ಕುಮಾರ, ಗುರುಪಾದಪ್ಪ ಗೌಡ ಬ. ಪಾಟೀಲ, ಹೆಚ್.ಟಿ. ನಾಗೇಶ್, ಉಮೇಶ ಶಿ. ಬಾಳಿ, ಮುಖ್ಯಕಾರ್ಯನಿರ್ವಹಣಾಧಿಕಾರಿ ಪ್ರಜ್ವಲ್ ಕೆ.ಎನ್ ಹಾಗೂ ಹಿರಿಯ ಸಹಕಾರಿಗಳು ಉಪಸ್ಥಿತರಿದ್ದರು.

ಬೆಳಗಾವಿ ಪ್ರಾಂತ ಜಂಟಿ ನಿಬಂಧಕರಾದ ಡಾ. ಸುರೇಶ್‌ಗೌಡ ಪಾಟೀಲ್‌ರವರು ಸಹಕಾರ ಸಂಘಗಳ ನಿರ್ವಹಣೆಯಲ್ಲಿ ಆಡಳಿತ ಮಂಡಳಿ ಸದಸ್ಯರು ಹಾಗೂ ಸಿಬ್ಬಂದಿ ವರ್ಗದವರ ಪ್ರಮುಖ ಪಾತ್ರ ಕುರಿತು, ಆದಾಯ ತೆರಿಗೆ ಅಧಿಕಾರಿಗಳಾದ ಪಂಪಾಪತಿ ದೇಸಾಯಿ ಅವರು ಸಹಕಾರ ಸಂಘಗಳು ಆದಾಯ ತೆರಿಗೆಗಳ ನಿರ್ವಹಣೆ ಕುರಿತು, ಬೆಳಗಾವಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ನಿರ್ಮಲಾ ಬಟ್ಟಲ ರವರು ವಿವಿಧ ವಿಷಯಗಳ ಕುರಿತು ಉಪನ್ಯಾಸ ನೀಡಿದರು.

# ನವದೆಹಲಿಯಲ್ಲಿ ಪತ್ತಿನ ಸಹಕಾರ ಸಂಘಗಳ ರಾಷ್ಟ್ರೀಯ ಸಮಾವೇಶ

## ಪತ್ತಿನ ಸಹಕಾರ ಸಂಘಗಳಿಗೆ ಪ್ರತ್ಯೇಕ ರಾಷ್ಟ್ರೀಯ ಮಹಾಮಂಡಳ ಅಗತ್ಯ – ಪತ್ತಿನ ಸಹಕಾರ ಸಂಘಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಶೀಘ್ರ ಪರಿಹಾರ : ಕೇಂದ್ರ ಸಚಿವ ನರೇಂದ್ರ ಸಿಂಗ್ ತೋಮರ್



**ನವದೆಹಲಿ** : ಸಹಕಾರ ಭಾರತಿ ಮತ್ತು ವಿವಿಧ ರಾಜ್ಯಗಳ ಪತ್ತಿನ ಸಹಕಾರ ಮಹಾಮಂಡಳಗಳು ಹಾಗೂ ಪತ್ತಿನ ಸಂಘಗಳ ಸಹಯೋಗದಲ್ಲಿ ಡಿಸೆಂಬರ್ 2 ರಂದು ನವದೆಹಲಿಯಲ್ಲಿ ರಾಷ್ಟ್ರೀಯ ಸಮಾವೇಶವನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮವನ್ನು ಕೇಂದ್ರದ ಸಹಾಯಕ ಸಹಕಾರ ಸಚಿವ ಬಿ.ಎಲ್. ವರ್ಮ ಅವರು ಮತ್ತು ಕೃಷಿ ಸಚಿವ ನರೇಂದ್ರ ಸಿಂಗ್ ತೋಮರ್ ಅವರು ಜಂಟಿಯಾಗಿ ಉದ್ಘಾಟಿಸಿದರು.

ಪತ್ತಿನ ಸಹಕಾರ ಸಂಘಗಳು ಆದಾಯ ತೆರಿಗೆ ಸೇರಿದಂತೆ ಹಲವು ಪ್ರಮುಖ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಪತ್ತಿನ ಸಹಕಾರ ಚಳವಳಿ ಬಲಿಷ್ಠವಾಗಿ ಬೆಳೆಯಲು ಕೇಂದ್ರ ಸರ್ಕಾರ ಅಗತ್ಯ ನೆರವು ನೀಡುತ್ತದೆ ಎಂದು ಸಚಿವರ ನರೇಂದ್ರ ಸಿಂಗ್ ತೋಮರ್ ಅವರು ತಿಳಿಸಿದರು. ಸಹಕಾರ ವಲಯವನ್ನು ಎಲ್ಲಾ ಸಹಕಾರಿಗಳು ಕ್ರಿಯಾಶೀಲವಾಗಿ ಪಾಲ್ಗೊಳ್ಳುವುದರ ಮೂಲಕ ಬೆಳೆಸಬೇಕು. ಆಗ ಮಾತ್ರ ಸಹಕಾರದಿಂದ ಸಮೃದ್ಧಿ ಸಾಧ್ಯ ಎಂದರು.

ಬುಲ್ಡಾನ್ ಅರ್ಬನ್ ಸಹಕಾರ ಸಂಸ್ಥೆಯ ಅಧ್ಯಕ್ಷ ರಾಧೆ ಶಾಮ್ ಚಂದಕ್ ಅವರು ಮಾತನಾಡಿ, ಪತ್ತಿನ ಸಹಕಾರ ಸಂಘಗಳು ವ್ಯವಹಾರ ನಡೆಸುವಲ್ಲಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿವೆ. ಶಾಖೆಗಳ ವಿಸ್ತರಣೆ, ಸರ್ಫೇಶಿಯಾ ಕಾಯಿದೆ ಅಡಿಯಲ್ಲಿ ಸಾಲವನ್ನು ಮರುಪಾವತಿಸಲು ಅವಕಾಶ, ಸಾಲಗಾರರ ಸಿವಿಲ್ ಸ್ಕೋರ್ ತಿಳಿಯಲು ವೇದಿಕೆ ಸೇರಿದಂತೆ ಹಲವು ವಿಷಯಗಳ ಕುರಿತು ಸುದೀರ್ಘವಾಗಿ ಮಾತನಾಡಿದರು. ಇದೇ ರೀತಿಯಾಗಿ ಕರ್ನಾಟಕ ರಾಜ್ಯದ ಪತ್ತಿನ ಸಹಕಾರ ಸಂಘಗಳು ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ಕಂಡುಕೊಳ್ಳಬೇಕಾದ ಪರಿಹಾರೋಪಾಯಗಳ ಕುರಿತು ರಾಜ್ಯದ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ನಿರ್ದೇಶಕರಾದ ಡಾ. ಸಂಜಯ್ ಪಿ. ಹೊಸಮಠ ಅವರು ಸವಿಸ್ತಾರವಾಗಿ ಸಭೆಗೆ ವಿವರಿಸಿದರು.

ದೇಶದ ಸಹಕಾರ ಆಂದೋಲನವನ್ನು ಬಲಪಡಿಸುವಲ್ಲಿ ಕೇಂದ್ರ ಸಹಕಾರ ಸಚಿವಾಲಯವು 50ಕ್ಕೂ ಹೆಚ್ಚು ಉಪಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಕೇಂದ್ರ ಸಹಾಯಕ ಸಹಕಾರ ಸಚಿವ ಬಿ.ಎಲ್. ವರ್ಮ ಅವರು ತಿಳಿಸಿದರು. ರಾಷ್ಟ್ರೀಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳದ ಅಧ್ಯಕ್ಷ ಜ್ಯೋತೀಂದ್ರ ಮೆಹ್ತಾ ಅವರು ಮಾತನಾಡಿ ಸಹಕಾರ ಸಂಸ್ಥೆಗಳು ಸಮಾಜದಲ್ಲಿ ಹೆಚ್ಚು ವಿಶ್ವಾಸಾರ್ಹತೆಯನ್ನು ಗಳಿಸಲು ಆಡಳಿತ ಮಂಡಳಿ ಸದಸ್ಯರಲ್ಲಿ ಬದ್ಧತೆ, ಸಿಬ್ಬಂದಿಗಳಲ್ಲಿ ದಕ್ಷತೆ ಮತ್ತು ಶಿಸ್ತನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಪತ್ತಿನ ಸಹಕಾರ ಸಂಘಗಳ ಬಲವರ್ಧನೆಗೆ ರಾಷ್ಟ್ರೀಯ ಮಟ್ಟದಲ್ಲಿ ಪ್ರತ್ಯೇಕ ಪತ್ತಿನ ಸಹಕಾರ ಸಂಘಗಳ ಮಹಾಮಂಡಳ ಸ್ಥಾಪನೆಯ ಅಗತ್ಯವಿದೆ ಎಂದು ಸಹಕಾರಿಗಳು ಒಕ್ಕೊರಲಿನಿಂದ ಒತ್ತಾಯಿಸಿದರು. ಈ ಬಗ್ಗೆ ಸಮಿತಿ ರಚಿಸಿ ಮುಂದಿನ ಕ್ರಮವಿಡುವುದಾಗಿ ಕೇಂದ್ರ ಸಚಿವರು ಭರವಸೆ ನೀಡಿದರು.

ಸಮಾವೇಶದಲ್ಲಿ ಸಂಸದ ಅಣ್ಣಾ ಸಾಹೇಬ್ ಶಂಕರಜೊಲ್ಲೆ ಸೇರಿದಂತೆ, ಕರ್ನಾಟಕ ರಾಜ್ಯದ ಪತ್ತಿನ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ವಿ. ರಾಜು, ಉಪಾಧ್ಯಕ್ಷರಾದ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ, ನಿರ್ದೇಶಕರುಗಳಾದ ಶೇಖರಗೌಡ ಮಾಲಿಪಾಟೀಲ್, ಡಿ. ಚನ್ನಯ್ಯ, ಹೊನ್ನಯ್ಯ ವಿ. ಹಿರೇಮಠ, ಧರೆಪ್ಪ ಎಂ. ಅಲಗೂರ, ತಮ್ಮಣ್ಣ ಬಿ. ಕೆಂಚರಡ್ಡಿ, ಡಾ. ಸಂಜಯ ಪಿ. ಹೊಸಮಠ, ಬಿ.ಡಿ. ಭೂಕಾಂತ್, ಚಿತ್ತರಂಜನ್ ಬೋಳಾರ್, ಸೇರಿದಂತೆ ಪತ್ತಿನ ಸಹಕಾರ ಸಂಸ್ಥೆಗಳ ಹಿರಿಯ ಮುಖಂಡರುಗಳು ಭಾಗವಹಿಸಿದ್ದರು.

# ಚಿತ್ರದುರ್ಗದಲ್ಲಿ ರಾಜ್ಯ ಮಟ್ಟದ ತರಬೇತಿ ಕಾರ್ಯಕ್ರಮ

## ಸಹಕಾರ ತರಬೇತಿಗಳು ಜನರಲ್ಲಿ ಬದ್ಧತೆ ಹೆಚ್ಚಿಸುತ್ತವೆ : ಆರ್. ರಾಮರೆಡ್ಡಿ



**ಚಿತ್ರದುರ್ಗ :** ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಮತ್ತು ಪತ್ತಿನ ಸಹಕಾರ ಮಹಾಮಂಡಳ ಹಾಗೂ ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ಇವರುಗಳ ಸಹಯೋಗದೊಂದಿಗೆ ಬೆಂಗಳೂರು ವಿಭಾಗದ ಪತ್ತಿನ ಸಹಕಾರ ಸಂಘಗಳ ಸರ್ವತೋಮುಖ ಅಭಿವೃದ್ಧಿಗಾಗಿ ಅಧ್ಯಕ್ಷರು, ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿ ಮತ್ತು ಹಿರಿಯ ಅಧಿಕಾರಿಗಳಿಗೆ ಒಂದು ದಿನದ ರಾಜ್ಯ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮವನ್ನು ದುರ್ಗದ ಸಿರಿ ಹೋಟೆಲ್, ಚಿತ್ರದುರ್ಗ ಇದರ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾದ ಆರ್. ರಾಮರೆಡ್ಡಿ ಕಾರ್ಯಕ್ರಮ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಸುಮಾರು 100 ವರ್ಷಗಳ ಇತಿಹಾಸವುಳ್ಳ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ರಾಜ್ಯದ ಸಹಕಾರ ಚಳುವಳಿಯ ಆರೋಗ್ಯಕರ ಬೆಳವಣಿಗೆ ಮಹತ್ವದ ಕೊಡುಗೆ ನೀಡಿದೆ. “ಸಹಕಾರ ತತ್ವದ ಬಗ್ಗೆ ಜನಜಾಗೃತಿಯನ್ನು ಮೂಡಿಸುವುದು, ಸಹಕಾರ ತತ್ವದ ಬಗ್ಗೆ ಜನರಲ್ಲಿ ಬದ್ಧತೆಯನ್ನು ರೂಢಿಸುವುದು ನಮ್ಮ ಮುಖ್ಯ ಉದ್ದೇಶವಾಗಿದೆ ಎಂದರು.

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ ವಿ.ರಾಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಈ ದೇಶದ ಗ್ರಾಮೀಣ ಪ್ರದೇಶದ ಜನರ, ಕೃಷಿಕರ, ಬಡಜನರ, ಆರ್ಥಿಕವಾಗಿ ದುರ್ಬಲರಾದವರನ್ನು ಸ್ವಾವಲಂಬಿಗಳನ್ನಾಗಿ ಮಾಡಿ, ಅವರ ಬದುಕನ್ನು ಹಸನಾಗಿಸುವಲ್ಲಿ ಹಾಗೂ ಅವರನ್ನು ಆರ್ಥಿಕವಾಗಿ ಸಬಲೀಕರಣ ಮಾಡುವಲ್ಲಿ ನಮ್ಮರಾಜ್ಯದ ಸಹಕಾರ ಸಂಘಗಳು ಅತ್ಯಂತ ಮಹತ್ವರ ಪಾತ್ರ ವಹಿಸುತ್ತಿವೆ ಎಂದು ತಿಳಿಸಿದರು.

ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕರಾದ ಜಿಂಕಲ್ ಬಸವರಾಜ್ ಇವರು ಮಾತನಾಡಿ, ಸಹಕಾರ ಸಂಘ ಸಂಸ್ಥೆಗಳ ಯಶಸ್ವಿ ಕಾರ್ಯಾಚರಣೆಗೆ ರಾಜ್ಯ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರು ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ಅಗತ್ಯವಾದ ಸಹಕಾರ ಶಿಕ್ಷಣ, ತರಬೇತಿ, ಮತ್ತು ಸಂಘ ಸಂಸ್ಥೆಗಳ ಸಾಧನೆಗೆ ವ್ಯಾಪಕ ಪ್ರಚಾರ ನೀಡುವುದು ನಮ್ಮ ಮಹಾಮಂಡಳದ ಉದ್ದೇಶಗಳಾಗಿದೆ ಎಂದರಲ್ಲದೆ, ರಾಜ್ಯದ ಸಹಕಾರ ಚಳುವಳಿಯ ಬೆಳವಣಿಗೆಗೆ ಸಹಕಾರ ಮಹಾಮಂಡಳ ದೊಡ್ಡ ಪ್ರಮಾಣದ ಕೊಡುಗೆ ನೀಡುತ್ತಿದೆ ಎಂದರು.

ರಾಜ್ಯ ಸಹಕಾರ ಮಹಾಮಂಡಳದ ಸಲಹೆಗಾರರಾದ ಪಿ.ರುದ್ರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ರಾಜ್ಯ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ನಿರ್ದೇಶಕರಾದ ಡಿ.ಆರ್. ನಾಗೇಶಪ್ಪ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾದ ಎ.ಸಿ. ನಾಗರಾಜ್, ಚಿತ್ರದುರ್ಗ ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷರಾದ ಜೆ. ಶಿವಪ್ರಕಾಶ್, ಸಹಕಾರ ಸಂಘಗಳ ಉಪನಿಬಂಧಕರಾದ ಟಿ. ಮಧು ಶ್ರೀನಿವಾಸ್, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರಾದ ಕೆ. ಮಹೇಶ್ವರಪ್ಪ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಜ್ವಲ್, ಕೆ.ಎನ್. ಉಪಸ್ಥಿತರಿದ್ದರು.

ಸನ್ನದು ಲೆಕ್ಕಪರಿಶೋಧಕರಾದ ಅನಿಲ್ ಭಾರಧ್ವಾಜ್ ಇವರು ಜಿ.ಎಸ್.ಟಿ. ಮತ್ತು ಆದಾಯ ತೆರಿಗೆ ಕುರಿತು ಉಪನ್ಯಾಸ ನೀಡಿದರು.

8ನೇ ಪುಟಕ್ಕೆ...

## ಪಿಕಾರ್ಡ್ ಬ್ಯಾಂಕ್‌ಗಳಲ್ಲಿ ರೈತರು ಸಾಲದ ಅಸಲು ಕಟ್ಟಿದರೆ ಬಡ್ಡಿ ಮನ್ನಾ : ಮುಖ್ಯಮಂತ್ರಿ ಸಿದ್ದರಾಮಯ್ಯ



**ಬೆಳಗಾವಿ :** ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ಗಳಲ್ಲಿ ರೈತರು ಪಡೆದಿರುವ ಮಧ್ಯಮಾವಧಿ ಹಾಗೂ ದೀರ್ಘಾವಧಿ ಸಾಲಗಳ ಅಸಲನ್ನು ಅವಧಿಯೊಳಗೆ ಪಾವತಿಸಿದರೆ ಸಾಲದ ಮೇಲಿನ ಬಡ್ಡಿ ಮನ್ನಾ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ವಿಧಾನಸಭೆಯಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳ ಕುರಿತು ನಡೆದ ಚರ್ಚೆಗೆ ಅವರು ಉತ್ತರ ನೀಡಿದರು.



## ಬಡ್ಡಿ ಮನ್ನಾ : ಸಚಿವ ಕೆ.ಎನ್. ರಾಜಣ್ಣ ಹರ್ಷ

**ತುಮಕೂರು :** ರಾಜ್ಯದ ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ಗಳ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲದ ಅಸಲು ಕಟ್ಟಿದರೆ ಬಡ್ಡಿ ಮನ್ನಾ ಮಾಡಿರುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಸಹಕಾರ ಸಚಿವ ಕೆ.ಎನ್. ರಾಜಣ್ಣ ಹರ್ಷ ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ ಈಗ ಬರಗಾಲವಿದೆ. ಈ ಸಂದರ್ಭದಲ್ಲಿ ಬೆಳಗಾವಿಯಲ್ಲಿ ನಡೆದ ವಿಧಾನ ಮಂಡಳದ ಅಧಿವೇಶನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರುಗಳು ರೈತರ ಸಾಲದ ಬಡ್ಡಿಯನ್ನು ಮನ್ನಾ ಮಾಡುವುದಾಗಿ ಘೋಷಣೆ ಮಾಡಿರುವುದಕ್ಕೆ ರೈತರ ಪರವಾಗಿ ರಾಜಣ್ಣ ಅವರು ಅಭಿನಂದನೆ ಸಲ್ಲಿಸಿದ್ದಾರೆ. ಬರಗಾಲದ ಈ ಸಂದರ್ಭದಲ್ಲಿ ಸರ್ಕಾರ ರೈತರನ್ನು ರಕ್ಷಿಸಲು, ಅವರ ಹಿತ ಕಾಪಾಡಲು ಬದ್ಧವಾಗಿದೆ. ಈ ಸಂಕಷ್ಟದಲ್ಲಿ ಬಡ್ಡಿ ಮನ್ನಾ ವಿಚಾರ ಸಾಕಷ್ಟು ಅನುಕೂಲವಾಗಲಿದೆ ಎಂದವರು ತಿಳಿಸಿದ್ದಾರೆ.

...7ನೇ ಪುಟದಿಂದ



ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಗುರುಸ್ವಾಮಿ ಇವರು ಪತ್ತಿನ ಸಹಕಾರ ಸಂಘಗಳ ಸಾಲ ವಸೂಲಾತಿ ಕ್ರಮಗಳ ಕುರಿತು ಉಪನ್ಯಾಸ ನೀಡಿದರು.

ಸಮನ್ವಯ ಕಾಶಿ, ಅಧೀಕ್ಷಕರು, ಕೌಶಲ್ಯಾಭಿವೃದ್ಧಿ ಇಲಾಖೆ, ಶಿವಮೊಗ್ಗ ಇವರು ಸಮಯ ಮತ್ತು ಒತ್ತಡ ನಿರ್ವಹಣೆ ಕುರಿತು ಉಪನ್ಯಾಸ ನೀಡಿದರು.

ಕಾಳಿಕಾಂಭ ಪತ್ತಿನ ಸಹಕಾರ ಸಂಘದ ವ್ಯವಸ್ಥಾಪಕರಾದ ಪಿ. ಲೀಲಾ ಪ್ರಾರ್ಥಿಸಿದರು. ಕಾರ್ಯಕ್ರಮದ ಸಮನ್ವಯ ಅಧಿಕಾರಿ ಎಸ್. ಎಸ್. ವೇಣುಗೋಪಾಲ್ ಸ್ವಾಗತಿಸಿದರು.

ತುಮಕೂರು ಜಿಲ್ಲಾ ಸಹಕಾರ ಯೂನಿಯನ್ ಸಿಇಒ ಮಹಂತೇಶ್ ಕಾರ್ಯಕ್ರಮ ನಿರೂಪಿಸಿದರು. ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ಸಿಇಒ ನಾಗರಾಜ ಪಾಟೀಲ್ ವಂದನಾರ್ಪಣೆ ಮಾಡಿದರು. ಶಿವಮೊಗ್ಗ ಜಿಲ್ಲಾ ಸಹಕಾರ ಯೂನಿಯನ್ ಸಿಇಒ ಯಶವಂತ್ ಸೇರಿದಂತೆರಾಜ್ಯದ ವಿವಿಧ ಭಾಗಗಳಿಂದ ಅನೇಕ ಸಹಕಾರಿಗಳು ಭಾಗವಹಿಸಿದ್ದರು.

ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಏರ್ಪಡಿಸಿದ್ದ ವಿಷಯಗಳು ಮತ್ತು ತಜ್ಞ ಉಪನ್ಯಾಸದಿಂದ ಪಡೆದ ಮಾಹಿತಿಗಳು ಉಪಯುಕ್ತವಾಗಿತ್ತೆಂದು ಅಭಿಪ್ರಾಯ ವ್ಯಕ್ತಪಡಿಸಿದರು.

# ಬರದ ನಡುವೆ ಸುಗ್ಗಿಯ ಹಬ್ಬ ಸಂಕ್ರಾಂತಿ ಆಚರಣೆ

ಸವಿತಾ ನಾಯ್ಕ್, ಬೆಂಗಳೂರು.



ಈ ಭಾರಿ ರಾಜ್ಯದಲ್ಲಿ ಹಿಂದೆಂದಿಗಿಂತ ದೊಡ್ಡ ಪ್ರಮಾಣದಲ್ಲಿ ಭೀಕರ ಬರಗಾಲ ಎದುರಾಗಿದೆ. ರಾಜ್ಯದ 195 ತಾಲ್ಲೂಕುಗಳು ಬರ ಪೀಡಿತವಾಗಿದೆ ಎಂದು ರಾಜ್ಯ ಸರ್ಕಾರ ಅಧಿಕೃತವಾಗಿ ಘೋಷಿಸಿದೆ. ರೈತರು, ಜನ ಜಾನುವಾರುಗಳು ಬರದಿಂದ ತತ್ತರಿಸಿವೆ. ನೀರಿಲ್ಲದೆ ಫಸಲು ಸಂಪೂರ್ಣವಾಗಿ ನೆಲಕಚ್ಚಿದೆ. ಬರದ ನಡುವೆಯೇ ರೈತರು ಸುಗ್ಗಿ ಹಬ್ಬ ಸಂಕಾಂತಿಯನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸುತ್ತಿದ್ದಾರೆ.

ರೈತರಿಗೂ ಸಂಕ್ರಾಂತಿ ಹಬ್ಬಕ್ಕೂ ನೇರ ಸಂಬಂಧವಿದೆ ಹೇಗೆಂದರೆ, ಸಂಕ್ರಾಂತಿ ಹಬ್ಬ ನಿಸರ್ಗದ ಹಬ್ಬ. ಮಾನವ ಹಾಗೂ ಪಶು, ಪಕ್ಷಿ, ಜಲಚರಗಳ, ಎಲ್ಲಾ ಬಯಕೆ ಹಾಗೂ ಅಗತ್ಯಗಳನ್ನು ಪೂರೈಸುವ ಪ್ರಕೃತಿ ಮಾತೆಗೆ ಪೂಜೆ ಸಲ್ಲಿಸುವುದೆ ಸಂಕ್ರಾಂತಿ ಹಬ್ಬದ ಮುಖ್ಯ ಆಶಯ. ಮಳೆ ಬೆಳೆ ಸರಿಯಾಗಿ ಬಂದರೆ ಹುರುಪು, ಹುಮ್ಮಸು, ಸಡಗರ ಸಂಭ್ರಮದಿಂದ ರೈತರು ಹಬ್ಬ ಆಚರಿಸುತ್ತಾರೆ. ಆದರೆ ಈ ವರ್ಷ ಮಳೆ ಕೈಕೊಟ್ಟಿದ್ದರಿಂದ ಹಬ್ಬದ ಹುಮ್ಮಸ್ಸು ಹಾಗೂ ಸಂಭ್ರಮ ಕಡಿಮೆಯಾಗಿದೆ. ಬೆಳೆ ನಾಶವಾಗಿ ರೈತರು ಸಾಲದ ಸುಳಿಗೆ ಸಿಲುಕಿದ್ದಾರೆ. ರೈತರಿಗೆ ನೆರವಾಗಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಹಕಾರಿ ಬ್ಯಾಂಕ್ ಗಳಲ್ಲಿ ಪಡೆದ ಸಾಲದ ಅಸಲು ತೀರಿಸಿದರೆ ಬಡ್ಡಿ ಮನ್ನಾ ಮಾಡುವುದಾಗಿ ಬೆಳಗಾವಿ ಅಧಿವೇಶನದಲ್ಲಿ ಘೋಷಿಸಿದ್ದಾರೆ. ಅಗತ್ಯ ವಸ್ತಗಳ ಬೆಲೆ ಏರಿಕೆಯು ಹಬ್ಬದ ಸಂಭ್ರಮವನ್ನು ಕಡಿಮೆ ಮಾಡಿದೆ.

ಸಂಕ್ರಾತಿ ಹಬ್ಬದಂದು ಸೂರ್ಯ ತನ್ನ ಪಥ ಬದಲಾಯಿಸವುದು ಪ್ರಕೃತಿಯಲ್ಲಿ ನಡೆಯುವ ಪ್ರಮುಖ ಘಟನೆಯಾಗಿದೆ.

ಇನ್ನೊಂದು ಕಡೆ ಸಂಕ್ರಾಂತಿ ಹಬ್ಬವನ್ನು ಎಳ್ಳು-ಬೆಲ್ಲದ ಹಬ್ಬ ಎನ್ನುತ್ತಾರೆ. ರೈತರು ತಾವು ಬೆಳೆದ ಬೆಳೆಗಳನ್ನು ರಾಶಿ ರಾಶಿಯಾಗಿ ಹಾಕಿ ಅದಕ್ಕೆ ಪೂಜೆ ಮಾಡುತ್ತಾರೆ. ಈ ಕಾರಣಕ್ಕಾಗಿ ಸುಗ್ಗಿಯ ಹಬ್ಬ ಎನ್ನುತ್ತಾರೆ. ಸಂಕ್ರಾಂತಿಯ ಹಬ್ಬದ ದಿನ ಎಳ್ಳು ದಾನ ಮಾಡಬೇಕು ಎಂಬ ನಿಯಮವಿದೆ. ಎಳ್ಳು ಶನಿ ಗ್ರಹದ ಪ್ರತಿನಿಧಿ ಹಾಗೂ ಆತನ ಧಾನ್ಯವಾಗಿದೆ. (ಶನಿಗ್ರಹ ಎಂದೊಡನೆ ಎಲ್ಲರಿಗೂ ಏನೋ ಒಂದು ರೀತಿ ಭಯ) ಎಳ್ಳನ್ನು ನಾವು ದಾನ ಮಾಡಲು ಹೋದಾಗ ಸಾಮಾನ್ಯವಾಗಿ ಅದನ್ನು ತೆಗೆದುಕೊಳ್ಳಲು ಇಷ್ಟ ಪಡುವುದಿಲ್ಲ. ಕಾರಣ ಅವರ ಪಾಪ ನಾವು ತೆಗೆದುಕೊಂಡ ಹಾಗೆ ಎಂದು ಹಾಗೂ ದೋಷ ಉಂಟಾಗುವುದು ಎಂದು. ಆದ್ದರಿಂದ ಈ ಕಾರಣದಿಂದ ಎಳ್ಳಿನ ಜತೆಯಲ್ಲಿ ಬೆಲ್ಲ, ಕಡಲೆಬೀಜ, ಕೊಬ್ಬರಿಯನ್ನು ಮಿಶ್ರಣ ಮಾಡಿ ದಾನ ಮಾಡುವ ಪದ್ಧತಿ ಪ್ರಾರಂಭವಾಯಿತು. ಅಲ್ಲದೆ ಆ ಬೆಳೆಗಳು ಆಗ ತಾನೆ ಬೆಳೆದು ಮಾರುಕಟ್ಟೆಗೆ ಬಂದಿರುತ್ತದೆ. ಅವುಗಳನ್ನು ಪೂಜೆ ಮಾಡಿ ದಾನ ಧರ್ಮ ಮಾಡಿದರೆ ಇನ್ನು ಫಲ ಹೆಚ್ಚು ಬರುವುದು ಎಂಬ ನಂಬಿಕೆಯೂ ಇದೆ.





ವೈಜ್ಞಾನಿಕ ರೀತಿಯಲ್ಲಿ ನೋಡಿದಾಗ ಸಂಕ್ರಾಂತಿಯ ಸಮಯದಲ್ಲಿ ಚಳಿ ಹೆಚ್ಚು ಇರುತ್ತದೆ. ಎಳ್ಳು ಸೇವನೆಯಿಂದ ದೇಹದ ಉಷ್ಣತೆ ಹೆಚ್ಚು ಆಗುತ್ತದೆ ಹಾಗೂ ಚರ್ಮದ ಕಾಂತಿಯೂ ಹೆಚ್ಚುತ್ತದೆ. ಈ ಹಬ್ಬವು ಅತ್ಯಂತ ಪ್ರಾಚೀನ ಕಾಲದಿಂದಲೂ ಆಚರಣೆಗೆ ಬಂದಿದೆ.

ಗ್ರಾಮೀಣ ಪ್ರದೇಶದಲ್ಲಿ ರೈತರು ಆ ದಿನ ಎತ್ತುಗಳಿಗೆ ಪೂಜೆ ಸಲ್ಲಿಸಿ ಕಿಚ್ಚು ಹಾಯಿಸುತ್ತಾರೆ. ಭಾರತದ ವಿವಿಧ ರಾಜ್ಯಗಳಲ್ಲಿ ಸಂಕ್ರಾತಿ ಹಬ್ಬ ವನ್ನು ವಿಭಿನ್ನ ಹೆಸರಿನಿಂದ ಆಚರಿಸಿ ಪ್ರಕೃತಿ ಮಾತೆಗೆ ಪೂಜಿಸುತ್ತಾರೆ. ಅದೇ ಪ್ರಕಾರ ಹೊರ ದೇಶದಲ್ಲೂ ವಿಭಿನ್ನ ರೀತಿಯಲ್ಲಿ ಈ ಹಬ್ಬವನ್ನು ಆಚರಿಸುತ್ತಾರೆ.

ಸಂಕ್ರಾಂತಿ ಹಬ್ಬದ ದಿನದಂದು ಎಳ್ಳು ಬೆಲ್ಲ(ಸಕ್ಕರೆ) ನೆಲಗಡಲೆ, ಸಕ್ಕರೆ ಅಚ್ಚು, ಕೊಬ್ಬರಿ, ಕಬ್ಬು ಬೆರೆಸಿದ ವಿಶೇಷ ಸಿಹಿಯನ್ನು ದೇವರಿಗೆ ನೈವೇದ್ಯ ಮಾಡಿ ನಂತರ ವಿವಾಹಿತ ಹಾಗೂ ಅವಿವಾಹಿತ ಹೆಣ್ಣು ಮಕ್ಕಳು ತಮ್ಮ ಆಪ್ತರೇಷ್ಟರಿಗೆ ಹಂಚಿ ಸಂತೋಷವನ್ನು ಪಡುತ್ತಾರೆ. ಈ ದಿನ ಶ್ರೀರಾಮನ ಪೂಜೆಯನ್ನು ಆಂಧ್ರಪ್ರದೇಶದಲ್ಲಿ ಮಾಡುತ್ತಾರೆ. ತಮಿಳುನಾಡಿನಲ್ಲಿ ಪೊಂಗಲ್ ಹೆಸರಿನಲ್ಲಿ ಸಂಕ್ರಾಂತಿ ಹಬ್ಬ ಅತ್ಯಂತ ಸಡಗರ, ಸಂಭ್ರಮದಿಂದ ಆಚರಿಸಲಾಗುತ್ತದೆ. ಪೊಂಗಲ್ ಹಬ್ಬಕ್ಕೆ ಬೆಲ್ಲ, ಅಕ್ಕಿ, ತುಪ್ಪದಿಂದ ತಯಾರಿಸಿದ ಪೊಂಗಲನ್ನು (ಅಕ್ಕಿಯ ಪಾಯಸ) ಸುತ್ತಲೂ ಕಬ್ಬನ್ನು ಕಟ್ಟಿ ಸಿಂಗರಿಸಿದ ಒಲೆಯಲ್ಲಿ ಮಾಡಿ ಹಬ್ಬವನ್ನು ಆಚರಿಸುತ್ತಾರೆ. ರೈತರು ಈ ದಿನದಂದು ಹಸುಗಳಿಗೆಗ ಮೈತೊಳೆದು, ಸಿಂಗರಿಸಿ ಮೆರವಣಿಗೆ ಮಾಡಿ, ಸಂಜೆ ಊರ ಒಂದು ಬೀದಿಯ ದಾರಿಯಲ್ಲಿ ಕಿಚ್ಚು ಹಾಯಿಸುತ್ತಾರೆ. ಎಳ್ಳಿನ ಹಬ್ಬವೆಂದು ಪ್ರಸಿದ್ಧವಾದ ಈ ದಿನದಂದು, ನಾನಾ ರೂಪಗಳಲ್ಲಿ ಎಳ್ಳನ್ನು ಬಳಸುವುದಲ್ಲದೆ, ಪೀಡಾ ಪರಿಹಾರಾರ್ಥವಾಗಿ ಎಳ್ಳನ್ನು ಹಾಗೂ ಎಳಚಿ ಹಣ್ಣನ್ನು ಸುರಿಯುತ್ತಾರೆ. ಪುರಾಣಗಳ ಪ್ರಕಾರ ಈ ದಿನದಿಂದ ದೇವತೆಗಳಿಗೆ ಹಗಲು, ರಾಕ್ಷಸರಿಗೆ ರಾತ್ರಿಯಾಗುವುದರಿಂದ ಆನಂದಕ್ಕಾಗಿ ಎಳ್ಳು ಬೆಲ್ಲ ತಿಂದು ಒಳ್ಳೆಯ ಹಿತ ನುಡಿಯುವ ಉದ್ದೇಶದಿಂದಾಗಿ ಎಳ್ಳು ಬೆಲ್ಲ ಹಂಚುವರು. ನಮ್ಮ ದೇಶದಲ್ಲಿ ಆಚರಿಸಲ್ಪಡುವ ಪ್ರತಿಯೊಂದು ಧರ್ಮದ ಹಬ್ಬಕ್ಕೂ ತನ್ನದೇ ಆದ ಐತಿಹಾಸಿಕ, ಪೌರಾಣಿಕ, ವೈಜ್ಞಾನಿಕ ಮಹತ್ವಗಳಿವೆ. ಆದರೆ ಇತ್ತೀಚಿನ ಒತ್ತಡದ ಜೀವನದಲ್ಲಿ ಹಬ್ಬಗಳ ಆಚರಣೆಯೇ ಕಣ್ಮರೆಯಾಗುತ್ತಿರುವುದು ವಿಪರ್ಯಾಸ. ನಮ್ಮ ಇಂದಿನ ಪೀಳಿಗೆಯವರಿಗೆ ಪಾಶ್ಚಾತ್ಯೀಕರಣದ ಪ್ರಭಾವದಿಂದ ನಮ್ಮ ಸಂಸ್ಕೃತಿಕ ದ್ಯೋತಕವಾದ ಹಬ್ಬಗಳು ಯಾವುದು ಎಂಬುದೇ ತಿಳಿಯದಂತಾಗಿದೆ. ಹೀಗಾಗಿ ಅನುಕರಣೆಯ ಜಾಡ್ಯವನ್ನು ತೊರೆದು ಪರಂಪರಾಗತವಾಗಿ ಆಚರಣೆಗೆ ಒಳಪಟ್ಟ ಹಬ್ಬ ಹರಿದಿನಗಳನ್ನು ಹಿರಿಯರು ಆಚರಿಸುತ್ತಾ ಮಕ್ಕಳಿಗೂ ಅದರ ಮಹತ್ವ, ಹಿನ್ನೆಲೆ ಬಗ್ಗೆ ತಿಳಿಸಿ, ಅದು ಮುಂದಿನ ಪೀಳಿಗೆಯವರೆಗೆ ಮುಂದುವರಿಯುವಂತೆ ಮಾಡುವುದು ಸತ್ಸಂಪ್ರದಾಯ.

ಈ ನಡುವೆ ಅಯ್ಯೋಧೆಯಲ್ಲಿ ಶ್ರೀ ರಾಮ ಮಂದಿರ ಪವಿತ್ರ ಸಂಕಾಂತಿ ಹಬ್ಬದ ಹೊಸ್ತಿಲಲ್ಲಿ ಉದ್ಘಾಟನೆ ಯಾಗುತ್ತಿರುವುದು ಭಾರತೀಯರೆಲ್ಲರಿಗೂ ಸಂತಸ ನೀಡುವ ವಿಷಯವಾಗಿದೆ.



# ಗಣರಾಜ್ಯೋತ್ಸವದ ಸಂಭ್ರಮದಲ್ಲಿ ಭಾರತ

▶▶ ಮಂಜುನಾಥ್ ನಾಯ್ಕ್, ಹಿರಿಯ ಪತ್ರಕರ್ತರು, ಬೆಂಗಳೂರು.



ಭಾರತೀಯ ಬ್ಯಾಹ್ಯಾಕಾಶ ಸಂಸ್ಥೆಯಿಂದ (ಇಸ್ರೋ) ಪ್ರಪ್ರಥಮ ಬಾರಿಗೆ ಚಂದ್ರನ ದಕ್ಷಿಣ ಧ್ರುವಕ್ಕೆ ಯಶಸ್ವಿ ಉಪಗ್ರಹ ಉಡಾವಣೆ, ಸೂರ್ಯನ ಶೋಧದಲ್ಲಿ ಮಹತ್ವದ ಪ್ರಗತಿ, ಆಳ ಸಮುದ್ರದ ಶೋಧಕ್ಕೆ ದಾಪುಗಾಲು. ಹೀಗೆ ವಿಜ್ಞಾನ, ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಜಗತ್ತು ನಿಬ್ಬೇರಗಾಗುವಂತಹ ಮಹತ್ವದ ಸಾಧನೆ ಮಾಡುತ್ತಿದ್ದು. ಈ ಸಂದರ್ಭದಲ್ಲಿ ಗಣರಾಜೋತ್ಸವ ಆಚರಣೆ ಸಂಭ್ರಮ ಇನ್ನಷ್ಟೂ ಅರ್ಥ ಪೂರ್ಣಗೊಳಿಸುವುದರ ಜೊತೆಗೆ ದೇಶದ ಸಾಧನೆ ಬಗ್ಗೆ ಜನತೆ ಹೆಮ್ಮೆ ಪಡುವಂತೆ ಮಾಡಿದೆ.

ಜಗತ್ತಿನ ಬೃಹತ್ ಪ್ರಜಾಪ್ರಭುತ್ವ ದೇಶ ಎಂಬ ಹೆಗ್ಗಳಿಕೆ ಗಳಿಸಿರುವ ಭಾರತದ ದಿನೇ ದಿನೇ ಅಭಿವೃದ್ಧಿ ಪಥದಲ್ಲಿ ದಾಪುಗಾಲು ಇಡುತ್ತಿರುವುದು ಸಂತಸ ವಿಷಯ.

140 ಕೋಟಿ ಗಿಂತ ಅಧಿಕ ಜನಸಂಖ್ಯೆ ಹೊಂದಿರುವ ಭಾರತ ಬಾಹ್ಯಾಕಾಶ, ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ಸಂಶೋಧನೆ, ಶಿಕ್ಷಣ, ಕೃಷಿ ಸಹಿತ ನಾನಾ ಕ್ಷೇತ್ರಗಳಲ್ಲಿ ಮಹತ್ವದ ಸಾಧನೆ ಮಾಡಿದ್ದು ಐದು ಟ್ರಿಲಿಯನ್ ಡಾಲರ್ ಆರ್ಥಿಕ ಶಕ್ತಿಯಾಗುವ ದಿಕ್ಕಿನಲ್ಲಿ ದಾಪುಗಾಲು ಹಾಕುವ ಮೂಲಕ ವಿಶ್ವದ ಬೃಹತ್ ಶಕ್ತಿಯಾಗಿ ಹೊರಹೊಮ್ಮಲು ಸಜ್ಜಾಗಿದೆ.

ಅತ್ಯಂತ ದೊಡ್ಡ ಸಂಖ್ಯೆಯ ವಿದ್ಯಾವಂತ ಯುವ ಸಮುದಾಯ ಹೊಂದಿರುವುದು ಭಾರತದ ಆರ್ಥಿಕ, ಶೈಕ್ಷಣಿಕ, ವೈಜ್ಞಾನಿಕ ಪ್ರಗತಿಗೆ ಸಹಕಾರಿಯಾಗಿದೆ.

ಆದರೂ ಭಾರತದಲ್ಲಿ ಜಾತಿ, ಮತ, ಧರ್ಮ ಭಾಷೆಗಳ ಹಸರಿನಲ್ಲಿ ನಡೆಯುತ್ತಿರುವ ಸಂಘರ್ಷಗಳು ಆರ್ಥಿಕ ಬೆಳವಣಿಗೆ ವೇಗ ಕಡಿವಾಣ ಹಾಕುತ್ತಿರುವುದು ದೇಶದ ಪ್ರಗತಿಗೆ ದೊಡ್ಡ ಹಿನ್ನಡೆಯಾಗಿದೆ.

ದೇಶವು 1947ರಲ್ಲಿ ಬ್ರಿಟಿಷರಿಂದ ಸ್ವಾತಂತ್ರ್ಯ ಪಡೆದುಕೊಂಡಿತು. ಆದರೆ ಮೂರು ವರ್ಷಗಳ ನಂತರ ಅಂದರೆ ಜನವರಿ 26, 1950ರಂದು ಭಾರತದಲ್ಲಿ ಸಂವಿಧಾನ ಜಾರಿಗೆ ಬಂದಿತು. ಈ ಕಾರಣದಿಂದಾಗಿ, ಪ್ರತಿ ವರ್ಷ ಜನವರಿ 26ರಂದು ಗಣರಾಜ್ಯೋತ್ಸವವನ್ನು ಆಚರಣೆ ಮಾಡಿಕೊಂಡು ಬರಲಾಗುತ್ತಿದೆ.

ಡಾ. ಬಾಬಾಸಾಹೇಬ್ ಭೀಮರಾವ್ ಅಂಬೇಡ್ಕರ್ ಅವರು ಸಂವಿಧಾನದ ಕರಡು ಸಮಿತಿಯ ಅಧ್ಯಕ್ಷರಾಗಿದ್ದರು. ನವೆಂಬರ್ 26, 1949ರಂದು "ಭಾರತ ಸಂವಿಧಾನ"ವನ್ನು "ಭಾರತದ ಸಂವಿಧಾನ ಸಭೆ"ಯು ಅಂಗೀಕರಿಸಿದ ಕಾರಣ ದೇಶದಲ್ಲಿ ಪ್ರತಿ ವರ್ಷ ನವೆಂಬರ್

**ಗಣರಾಜ್ಯೋತ್ಸವದ ಆಕರ್ಷಕ ಸೇನಾ ಪಥ ಸಂಚಲನ ಕಣ್ಣು ತುಂಬಿಕೊಂಡ ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯಲ್ ಮ್ಯಾಕ್ರನ್ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ರಾಷ್ಟಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ ದ್ವಿಪಕ್ಷೀಯ ಸಂಬಂಧ ಚರ್ಚಿಸುವ ಮೂಲಕ ಉಭಯ ದೇಶಗಳ ಸಂಬಂಧಕ್ಕೆ ಹೊಸ ಭಾಷ್ಯ ಬರೆಯಲು ಸಹಕಾರಿಯಾಗಲಿದೆ. ಭಾರತೀಯ ಸೇನೆ, ನೌಕಾಪಡೆ ಮತ್ತು ವಾಯುಪಡೆ ವಿಶೇಷ ಪಥ ಸಂಚಲನ ಹಾಗೂ ಭಾರತದ ಸಾಂಸ್ಕೃತಿಕ ಮತ್ತು ಸಾಮಾಜಿಕ ಪರಂಪರೆಯನ್ನು ಪ್ರದರ್ಶಿಸುವ ಕಾರ್ಯಕ್ರಮಗಳ ಜೊತೆಗೆ ವಿವಿಧ ರಾಜ್ಯಗಳ ಕಲೆ, ಸಂಸ್ಕೃತಿ, ಆಚಾರ, ವಿಚಾರ ಬಿಂಬಿಸುವ ಸ್ತಬ್ಧಚಿತ್ರಗಳು ರಾಜಪಥದಲ್ಲಿ ಕಾಣಿಸಿಕೊಳ್ಳುತ್ತವೆ.**



26ರಂದು "ಸಂವಿಧಾನ ದಿನ"ವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಭಾರತದ ಸಂವಿಧಾನವನ್ನು ರಚಿಸುವ ಉದ್ದೇಶವನ್ನು ಹೊಂದಿದ್ದ ಸಂವಿಧಾನ ಸಭೆಯು ತನ್ನ ಮೊದಲ ಸಭೆಯನ್ನು ಡಿಸೆಂಬರ್ 9, 1946ರಂದು ನಡೆಸಿತು. ಕೊನೆಯ ಸಭೆ ನವೆಂಬರ್ 26, 1949ರಂದು ಕೊನೆಗೊಂಡಿತು. ಒಂದು ವರ್ಷದ ತರುವಾಯ ಸಂವಿಧಾನ ಅಂಗೀಕಾರ ಮಾಡಲಾಯಿತು.

ಗಣರಾಜ್ಯೋತ್ಸವವು "ಸ್ವತಂತ್ರ ಭಾರತದ ಆತ್ಮದ ಸಂಕೇತ"ವಾಗಿದೆ. 1930ರಲ್ಲಿ ಈ ದಿನದಂದು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ "ಪೂರ್ಣ ಸ್ವರಾಜ್" ಎಂದು ಘೋಷಿಸಿತು. ಈ ದಿನವು ಭಾರತೀಯರಿಗೆ ತಮ್ಮ ಸರ್ಕಾರವನ್ನು "ಪ್ರಜಾಸತ್ತಾತ್ಮಕವಾಗಿ ಆಯ್ಕೆ ಮಾಡುವ ಶಕ್ತಿ"ಯನ್ನು ನೆನಪಿಸಿಕೊಡುತ್ತದೆ.

ಜನವರಿ 26ರ ದಿನದ ಪ್ರಮುಖ ಆಕರ್ಷಣೆಯೆಂದರೆ ಪರೇಡ್. ಇದು ದೆಹಲಿಯ ರಾಜಪಥದಿಂದ ಪ್ರಾರಂಭವಾಗಿ ಇಂಡಿಯಾ ಗೇಟ್ ವರೆಗೆ ಸೇನೆ ತನ್ನ ಶಕ್ತಿ ಪ್ರದರ್ಶನ ತೋರಿಸುತ್ತದೆ. ಗಣರಾಜ್ಯೋತ್ಸವ ಪಥ ಸಂಚಲನದಲ್ಲಿ ಭಾರತದ ರಕ್ಷಣಾ ಪಡೆಗಳ ಬೃಹತ್ ಶಕ್ತಿಯ ಪ್ರದರ್ಶನ ನೋಡುವುದೇ ಕಣ್ಣಿಗೆ ಹಬ್ಬ. ಇದರೊಂದಿಗೆ ಮಿಲಿಟರಿ ಬ್ಯಾಂಡ್‌ಗಳು ಮತ್ತು ವಿವಿಧ ರಾಜ್ಯಗಳ, ಇಲಾಖೆಗಳ ಮತ್ತು ಸಶಸ್ತ್ರ ಪಡೆಗಳ ಸ್ತಬ್ಧ ಚಿತ್ರಗಳು ಪ್ರಮುಖ ಆಕರ್ಷಣೆ.

ಈ ವರ್ಷದ ಗಣರಾಜ್ಯೋತ್ಸವದ ಮುಖ್ಯ ಅತಿಥಿಯಾಗಿ ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯಲ್ ಮ್ಯಾಕ್ರನ್ ಅವರನ್ನು ಆಹ್ವಾನಿಸಿರುವುದು



ಭಾರತ ಮತ್ತು ಫ್ರಾನ್ಸ್ ನಡುವಿನ ದ್ವಿಪಕ್ಷೀಯ ಸಂಬಂಧ ಇನ್ನಷ್ಟು ಗಟ್ಟಿಗೊಳಿಸಲಿದೆ ಅಲ್ಲದೆ ಭಾರತ ಮತ್ತು ಫ್ರಾನ್ಸ್ ನಡುವಿನ ಬೃಹತ್ ರಕ್ಷಣಾ ಒಪ್ಪಂದಗಳಿಗೂ ವೇಗ ಸಿಗಲಿದೆ.

26 ಅತ್ಯಾಧುನಿಕ ರಫೇಲ್ ಯುದ್ಧ ವಿಮಾನ ಖರೀದಿ ಮತ್ತು ಫ್ರಾನ್ಸ್ ತಂತ್ರಜ್ಞಾನ ಹಂಚಿಕೆಯೊಂದಿಗೆ ಭಾರತದಲ್ಲಿ ನಿರ್ಮಾಣವಾಗಲಿರುವ ಮೂರು ಜಲಾಂತರ್ಗಾಮಿ ಯೋಜನೆಗಳಿಗೂ ವೇಗ ಸಿಗಲಿದೆ.

ಗಣರಾಜ್ಯೋತ್ಸವದ ಆಕರ್ಷಕ ಸೇನಾ ಪಥ ಸಂಚಲನ ಕಣ್ಣು ತುಂಬಿಕೊಂಡ ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯಲ್ ಮ್ಯಾಕ್ರನ್ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ರಾಷ್ಟಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ ದ್ವಿಪಕ್ಷೀಯ ಸಂಬಂಧ ಚರ್ಚಿಸುವ ಮೂಲಕ ಉಭಯ ದೇಶಗಳ ಸಂಬಂಧಕ್ಕೆ ಹೊಸ ಭಾಷ್ಯ ಬರೆಯಲು ಸಹಕಾರಿಯಾಗಲಿದೆ. ಭಾರತೀಯ ಸೇನೆ, ನೌಕಾಪಡೆ ಮತ್ತು ವಾಯುಪಡೆ ವಿಶೇಷ ಪಥ ಸಂಚಲನ ಹಾಗೂ ಭಾರತದ ಸಾಂಸ್ಕೃತಿಕ ಮತ್ತು ಸಾಮಾಜಿಕ ಪರಂಪರೆಯನ್ನು ಪ್ರದರ್ಶಿಸುವ ಕಾರ್ಯಕ್ರಮಗಳ ಜೊತೆಗೆ ವಿವಿಧ ರಾಜ್ಯಗಳ ಕಲೆ, ಸಂಸ್ಕೃತಿ, ಆಚಾರ, ವಿಚಾರ ಬಿಂಬಿಸುವ ಸ್ತಬ್ಧಚಿತ್ರಗಳು ರಾಜಪಥದಲ್ಲಿ ಕಾಣಿಸಿಕೊಳ್ಳುತ್ತವೆ.

ಭಾರತದ ಗಣರಾಜ್ಯೋತ್ಸವ ಆಚರಣೆ ಅಂದರೆ ದೇಶವು ವಿವಿಧತೆಯಲ್ಲಿ ಏಕತೆ ಸಾಧಿಸಿದ ಪರಿಯನ್ನು ದೇಶ ವಿದೇಶಗಳ ಕೋಟ್ಯಾಂತರ ಜನ ಕಣ್ತುಂಬಿ ಕೊಳ್ಳುವ ಮೂಲಕ ವಿಶ್ವ ಮಾನವ ಸಂದೇಶವನ್ನು ಜಗತ್ತಿನಾದ್ಯಂತ ಹರಡಲು ಸಹಕಾರಿಯಾಗಲಿದೆ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : **2023–24ನೇ ಸಾಲಿಗೆ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯನ್ನು ಜಾರಿಗೊಳಿಸಲು ಹಾಗೂ ಹೊಸ ಸದಸ್ಯರನ್ನು ನೋಂದಾಯಿಸುವ ಬಗ್ಗೆ.**

ಉಲ್ಲೇಖ : **ಸಹಕಾರ ಸಂಘಗಳ ನಿಬಂಧಕರ ಕಛೇರಿ ಪತ್ರ ಸಂಖ್ಯೆ: RCS/INDL/IND1(MISC)98/2023-INDUSTRIES, ದಿ: 3.10.2023.**

### ಪ್ರಸ್ತಾವನೆ :

ಮೇಲೆ ಓದಲಾದ ಸಹಕಾರ ಸಂಘಗಳ ವಿಬಂಧಕರ ಪತ್ರದಲ್ಲಿ, 2023–24ನೇ ಸಾಲಿನಲ್ಲಿ ಯಶಸ್ವಿನಿ ಯೋಜನೆಯನ್ನು ಮುಂದುವರೆಸಬೇಕಾಗಿರುತ್ತದೆ. ಯಶಸ್ವಿನಿ ಯೋಜನೆಯು ಸಹಕಾರ ಸಂಘಗಳ ಸದಸ್ಯರ ಅನುಕೂಲಕ್ಕಾಗಿ ಜಾರಿಗೊಂಡಿರುವ ಒಂದು ವಿಶಿಷ್ಟ ಯೋಜನೆಯಾಗಿದ್ದು, ಇದರಲ್ಲಿ ಫಲಾನುಭವಿ ಕುಟುಂಬಕ್ಕೆ ವಾರ್ಷಿಕ ಗರಿಷ್ಠ ರೂ.5.00 ಲಕ್ಷ ವೈದ್ಯಕೀಯ ಚಿಕಿತ್ಸಾ ವೆಚ್ಚದ ಮಿತಿ ನಿಗಧಿಪಡಿಸಿದೆ. ಫಲಾನುಭವಿಗಳು ಮತ್ತು ಕುಟುಂಬದ ಅರ್ಹ ಸದಸ್ಯರು ನಗದು ರಹಿತ ಚಿಕಿತ್ಸೆ ಪಡೆಯಲು ಅವಕಾಶ ಇರುತ್ತದೆ.

ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಯಶಸ್ವಿನಿ ಟ್ರಸ್ಟ್ ಇವರು ಯಶಸ್ವಿನಿ ಯೋಜನೆಯನ್ನು 2023–24 ಸಾಲಿಗೂ ಮುಂದುವರಿಸಲು ಅನುವಾಗುವಂತೆ ಸದಸ್ಯರ ನೋಂದಣಿಯನ್ನು ಪ್ರಾರಂಭಿಸಲು ಯೋಜನೆಯ ಆದೇಶ ಹಾಗೂ ಮಾರ್ಗಸೂಚಿಗಳನ್ನು ಹೊರಡಿಸಲು ಪುಸ್ತಾವೆಯನ್ನು ಸಲ್ಲಿಸಿರುವುದಾಗಿ ನಿಬಂಧಕರು ದಿನಾಂಕ:03–10–2023ರಲ್ಲಿ ತಿಳಿಸಿರುತ್ತಾರೆ.

2022–23ನೇ ಸಾಲಿನಲ್ಲಿ ಯಶಸ್ವಿನಿ ಸದಸ್ಯತ್ವ ನೋಂದಣಿ ಅವಧಿಯನ್ನು ದಿನಾಂಕ: 01–11–2022 ರಿಂದ ಪ್ರಾರಂಭಿಸಲಾಗಿತ್ತು. ನಂತರ ವಿವಿಧ ದಿನಾಂಕಗಳಲ್ಲಿ ನೋಂದಣಿ ಅವಧಿಯನ್ನು ವಿಸ್ತರಿಸಿ ಕೊನೆಯದಾಗಿ ದಿನಾಂಕ: 31–03–2023 ರವರೆಗೆ ವಿಸ್ತರಿಸಲಾಗಿತ್ತು. ಫಲಾನುಭವಿಗಳಿಗೆ ಚಿಕಿತ್ಸೆಯನ್ನು ಜನವರಿಯಿಂದ ಡಿಸೆಂಬರ್ 2023ರವರೆಗೆ ನಿಗದಿಗೊಳಿಸಲಾಯಿತು. 2022–23ನೇ ಸಾಲಿನಲ್ಲಿ 47.00 ಲಕ್ಷಕ್ಕೂ ಹೆಚ್ಚಿನ ಸದಸ್ಯರನ್ನು ನೋಂದಾಯಿಸಲಾಗಿದೆ. ಇಲ್ಲಿಯವರೆಗೆ ಒಟ್ಟು ಸುಮಾರು 36,500 ರೋಗಿಗಳ ಸುಮಾರು ರೂ. 61.00 ಕೋಟಿ ಮೊತ್ತದ ಚಿಕಿತ್ಸೆಗಳನ್ನು ಪಡೆದಿರುತ್ತಾರೆ.

ದಿನಾಂಕ: 19–09–2023 ರಂದು ಯಶಸ್ವಿನಿ ಟ್ರಸ್ಟ್ ಪೋಷಕರು ಹಾಗೂ ಮಾನ್ಯ ಸಹಕಾರ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಯಶಸ್ವಿನಿ ಯೋಜನೆಯ ರೂಪುರೇಷಗಳನ್ನು ನಿರ್ಧರಿಸಲಾಗಿರುತ್ತದೆ. ಸದರಿ ಸಭೆಯಲ್ಲಿ 2023–24ನೇ ಸಾಲಿನ ಆದೇಶದ ಮಾರ್ಗಸೂಚಿಗಳಲ್ಲಿ ಕೆಲವೊಂದು ಸೇರ್ಪಡೆ/ಬದಲಾವಣೆ ಮಾಡಿಕೊಳ್ಳಲು ತಿಳಿಸಿರುವುದರಿಂದ ಸಹಕಾರ ಸಂಘಗಳ ನಿಬಂಧಕರ ದಿನಾಂಕ :03–10–2023 ರ ಪ್ರಸ್ತಾವನೆಯನ್ನು ಪರಿಶೀಲಿಸಿ ಯಶಸ್ವಿನಿ ಯೋಜನೆಯಡಿ ಸದಸ್ಯತ್ವ ನೋಂದಣಿಯನ್ನು ಪ್ರಾರಂಭಿಸಲು ಯೋಜನೆಯ ಮಾರ್ಗಸೂಚಿಗಳನ್ನು ಹೊರಡಿಸಬೇಕಾಗಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಒ 205 ಸಿಎಲ್‌ಎಸ್ 2023, ದಿನಾಂಕ: 06–11–2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2023–24ನೇ ಸಾಲಿನಲ್ಲಿ ಯಶಸ್ವಿನಿ ಯೋಜನೆಯನ್ನು ಮುಂದುವರೆಸಲು ಅನುವಾಗುವಂತೆ ಸದಸ್ಯತ್ವ ನೋಂದಣಿ ಪ್ರಾರಂಭಿಸಲು ಕೆಳಕಂಡ ಮಾರ್ಗಸೂಚಿಗಳೊಂದಿಗೆ ಆದೇಶ ಹೊರಡಿಸಿದೆ.

**ಮಾರ್ಗಸೂಚಿಗಳು:**

1. ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರಡಿ ಅಥವಾ ಕರ್ನಾಟಕ ಸೌಹಾರ್ದ ಸಹಕಾರಿಗಳ ಕಾಯ್ದೆ 1997ರಡಿ ಅಥವಾ ಬಹು ರಾಜ್ಯ ಸಹಕಾರಿ ಸಂಘಗಳ ಕಾಯ್ದೆ 2002ರಡಿ ನೋಂದಾಯಿಸಿ, ಕಾರ್ಯನಿರ್ವಹಿಸುತ್ತಿರುವ ಯಾವುದೇ ಸಹಕಾರ ಸಂಘ ಅಥವಾ ಸಹಕಾರ ಸಂಘದ/ಸಹಕಾರ ಬ್ಯಾಂಕುಗಳ (ಕರ್ನಾಟಕ ರಾಜ್ಯ ಸೌಹಾರ್ದ, ಬಹುರಾಜ್ಯ ಕಾಯ್ದೆ, ಗ್ರಾಮೀಣ ಮತ್ತು ನಗರ ಸಹಕಾರ ಸಂಘಗಳು ಒಳಗೊಂಡಂತೆ) ಸದಸ್ಯರು, ಸಹಕಾರಿ, ಸಂಘಟಿಸಲ್ಪಟ್ಟಿರುವ ಸ್ವಸಹಾಯ ಗುಂಪುಗಳ ಸದಸ್ಯರುಗಳು, ಸಂಬಂಧಪಟ್ಟ ಸಂಘಗಳಲ್ಲಿ ಸದಸ್ಯರಾಗಿ ಮೂರು ತಿಂಗಳು ಪೂರ್ಣಗೊಂಡಿದ್ದಲ್ಲಿ ಅಂತಹ ಸದಸ್ಯರು ಮತ್ತು ಅವರ ಅರ್ಹ ಕುಟುಂಬ ಸದಸ್ಯರು ನಿಗದಿಪಡಿಸಿದ ವಾರ್ಷಿಕ ವಂತಿಕೆಯನ್ನು ಪಾವತಿಸಿ ಯಾವುದೇ ವಯೋಮಿತಿ ನಿರ್ಬಂಧವಿಲ್ಲದೇ ಯಶಸ್ವಿನಿ ಯೋಜನೆಯಡಿ ಸದಸ್ಯರಾಗಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.
2. 2023–24ನೇ ಸಾಲಿಗೆ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರಡಿ ನೋಂದಣಿಯಾಗಿ ಕಾರ್ಯನಿರತ ಸಹಕಾರ ಸಂಘ/ಬ್ಯಾಂಕುಗಳಲ್ಲಿ ಕವಿಷ್ಠ ಮೂರು ವರ್ಷ ಸೇವೆ ಪೂರ್ಣಗೊಳಿಸಿ ಮಾಸಿಕ ಒಟ್ಟು ವೇತನ ರೂ. 30,000/– ಮತ್ತು ಅದಕ್ಕಿಂತ ಕಡಿಮೆ ಪಡೆಯುತ್ತಿರುವ ನೌಕರರು ಮತ್ತು ಅವರ ಅರ್ಹ ಕುಟುಂಬ ಸದಸ್ಯರು ಯಶಸ್ವಿನಿ ಯೋಜನೆಯಡಿ ಸದಸ್ಯರಾಗಲು ಮತ್ತು ಸೌಲಭ್ಯ ಪಡೆಯಲು ಸರ್ಕಾರವು ಅವಕಾಶ ಕಲ್ಪಿಸಿದೆ. (ಕನಿಷ್ಠ ಮೂರು ವರ್ಷ ಸೇವೆ ಮತ್ತು ರೂ.30,000/– ಮತ್ತು ಅದಕ್ಕಿಂತ ಕಡಿಮೆ

ಒಟ್ಟು ವೇತನ ಪಡೆಯುತ್ತಿರುವ ಬಗ್ಗೆ ಸಹಕಾರ ಸಂಘದ ಆಡಳಿತ ಮಂಡಳಿ ದೃಢೀಕರಣ ಪತ್ರ ಲಗತ್ತಿಸಬೇಕು)

3. ಸಮಾಪನೆಗೊಂಡಿರುವ ಮತ್ತು ನಿಷ್ಕ್ರಿಯಗೊಂಡಿರುವ ಸಹಕಾರ ಸಂಘಗಳು ಹಾಗೂ ನೌಕರರ ಸಹಕಾರ ಸಂಘಗಳ ಸದಸ್ಯರಿಗೆ ಈ ಯೋಜನೆ ಅನ್ವಯಿಸುವುದಿಲ್ಲ. ಪ್ರಧಾನ ಅರ್ಜದಾರರು ಮತ್ತು ಅವನ ಕುಟುಂಬದ ಯಾವುದೇ ಸದಸ್ಯನು ಸರ್ಕಾರಿ ನೌಕರರಾಗಿದ್ದಲ್ಲಿ ಯೋಜನೆಗೆ ಅರ್ಹರಿರುವುದಿಲ್ಲ. ಅದೇ ರೀತಿ ಒಬ್ಬ ವ್ಯಕ್ತಿ ಖಾಸಗಿ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಮಾಸಿಕ ರೂ.30,000/-ಕ್ಕಿಂತ ಹೆಚ್ಚು ಒಟ್ಟು ವೇತನ ಪಡೆಯುತ್ತಿದ್ದಲ್ಲಿ ಅಥವಾ ಒಬ್ಬ ವ್ಯಕ್ತಿ ಯಾವುದೇ ಆರೋಗ್ಯ ವಿಮಾ ಯೋಜನೆಯಡಿಯಲ್ಲಿ ಸದಸ್ಯರಾಗಿದ್ದಲ್ಲಿ ಅಂತಹವರು ಯಶಸ್ವಿನಿ ಯೋಜನೆಯಡಿ ಸದಸ್ಯರಾಗಲು ಅರ್ಹನಿರುವುದಿಲ್ಲ. ಅಂತಹವರನ್ನು ಯಶಸ್ವಿನಿ. ಯೋಜನೆಯ ಫಲಾನುಭವಿಯಾಗಿ ನೋಂದಾಯಿಸಬಾರದು. ಆದಾಗ್ಯೂ ಯಾವುದೇ ಕಾರಣಕ್ಕೆ ನೋಂದಾಯಿಸಿದ್ದರೂ ಸಹ ಅವರು ಯೋಜನೆ ಸೌಲಭ್ಯ ಪಡೆಯಲು ಅರ್ಹರಾಗುವುದಿಲ್ಲ. ಅಂತಹ ವ್ಯಕ್ತಿಗಳು ಪಾವತಿಸಿದ ವಂತಿಗೆಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

4. ಯಶಸ್ವಿನಿ ಯೋಜನೆಯಲ್ಲಿನ ವ್ಯಾಖ್ಯಾನದಂತೆ "ಕುಟುಂಬ" ಎಂದರೆ ಪ್ರಧಾನ ಅರ್ಜದಾರರ (Principal Member) ತಂದೆ, ತಾಯಿ, ಗಂಡ/ಹೆಂಡತಿ, ಗಂಡು ಮಕ್ಕಳು, ಮದುವೆಯಾಗದ ಹೆಣ್ಣು ಮಕ್ಕಳು, ಸೊಸೆಯಂದಿರು ಮತ್ತು ಮೊಮ್ಮಕ್ಕಳು (ಗಂಡು ಮಕ್ಕಳ ಮಕ್ಕಳು) ಎಂದು ಅರ್ಥೈಯಿಸುವುದು. ಒಂದು ಮನೆಯಲ್ಲಿ ಸೊಸೆ ಪ್ರಧಾನ ಅರ್ಜಿದಾರರಾಗಿದ್ದಲ್ಲಿ ಅವರ ಗಂಡನ ತಂದೆ/ತಾಯಿ ಅಂದರೆ ಅರ್ಜದಾರರ ಅತ್ತೆ/ಮಾವ ರವರು ಅರ್ಹ ಸದಸ್ಯರಾಗುತ್ತಾರೆ. ಆದರೆ ಅರ್ಜದಾರರ ತಂದೆ/ತಾಯಿಯವರನ್ನು ಸದಸ್ಯರನ್ನಾಗಿ ಸೇರಿಸಿಕೊಳ್ಳಲು ಬರುವುದಿಲ್ಲ.

5. ಒಬ್ಬ ಯಶಸ್ವಿನಿ ಸದಸ್ಯ ಒಂದು ಅವಿಭಕ್ತ ಕುಟುಂಬದ ಸದಸ್ಯರಾಗಿದ್ದು, ಅವಿಭಕ್ತ ಕುಟುಂಬದ ಎಲ್ಲಾ ಸದಸ್ಯರಿಗೆ ಒಂದು ರೇಷನ್ ಕಾರ್ಡ್ ಹೊಂದಿದ್ದು, ಅದನ್ನು ಹಾಜರುಪಡಿಸಿದ್ದಲ್ಲಿ ಅಂತಹ ರೇಷನ್ ಕಾರ್ಡ್‌ನಲ್ಲಿ ಹೆಸರು ನಮೂದಾಗಿರುವ ಅವಿಭಕ್ತ ಕುಟುಂಬದ ಎಲ್ಲಾ ಸದಸ್ಯರು (ಮದುವೆಯಾಗದ ಗಂಡಸರು/ಹೆಂಗಸರನ್ನು ಒಳಗೊಂಡಂತೆ) ವಾರ್ಷಿಕ ವಂತಿಗೆ ಪಾವತಿಸಿದ್ದಲ್ಲಿ ಅಂತಹ ಕುಟುಂಬ ಸದಸ್ಯರಿಗೆ ಯೋಜನೆ ಸೌಲಭ್ಯ ಪಡೆಯಲು ಸರ್ಕಾರವು 2023-24 ರಿಂದ ಅವಕಾಶ ಕಲ್ಪಿಸಿದೆ. ಅವಿಭಕ್ತ ಕುಟುಂಬದ ಸದಸ್ಯರಿಗೆ ಒಂದೇ ರೇಷನ್ ಕಾರ್ಡ್ ಇಲ್ಲದಿದ್ದಲ್ಲಿ ನೋಂದಾಯಿಸಲು ಅವಕಾಶವಿರುವುದಿಲ್ಲ.

6. ಮದುವೆಯಾಗಿರುವ ಹೆಣ್ಣು ಮಗಳು ಹಾಗೂ ಅವರ ಮಕ್ಕಳು ಅವರ ತವರು ಮನೆಯಲ್ಲಿ ಅಂದರೆ ಅವರ ತಂದೆ/ತಾಯಿ/ಅಣ್ಣ/ತಮ್ಮ ಪ್ರಧಾನ ಅರ್ಜಿದಾರರ ಕುಟುಂಬದಲ್ಲಿಯೇ ಯಾವುದೇ (ವಿಧವೆ, ವಿಚ್ಛೇದನ, ಬೇರ್ಪಟ್ಟಿರುವುದು ಇತ್ಯಾದಿ) ಕಾರಣಗಳಿಗೆ ವಾಸವಾಗಿದ್ದರೆ ಮತ್ತು ಅವರ ವಂತಿಗೆಯನ್ನು ಪ್ರಧಾನ ಅರ್ಜದಾರರು ಪಾವತಿಸಿದ್ದರೆ ಈ ಯೋಜನೆ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

7. ಆದಾಗ್ಯೂ ಪ್ರಸಕ್ತ ಸಾಲಿನ ಯೋಜನೆಯ ಅವಧಿಯಲ್ಲಿ ಮದುವೆಯಾಗಿ ಗಂಡನ ಮನೆಯಲ್ಲಿರುವಂತಹ ಹೆಣ್ಣು ಮಕ್ಕಳಿಗೆ ತವರು ಮನೆಯ ಕಾರ್ಡಿನ ಮೇಲೆ ಆ ವರ್ಷದ ವಾರ್ಷಿಕ ವಂತಿಗೆ ಪಾವತಿಸಿ ಸದಸ್ಯರನ್ನಾಗಿ. ನೋಂದಣಿ ಮಾಡಬಾರದು. ಆದರೆ ನೋಂದಣಿ ಮಾಡಿದ ನಂತರ ಮದುವೆಯಾದಲ್ಲಿ ಆ ವರ್ಷದಲ್ಲಿ ಮಾತ್ರ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

8. ನವಜಾತ ಶಿಶುವು ತಾಯಿ ಹೆಸರು ಇರುವ ಯಶಸ್ವಿನಿ ಕಾರ್ಡ್‌ನ ಆಧಾರದ ಮೇಲೆ ಈ ಯೋಜನೆಯಡಿಯಲ್ಲಿ ಸೌಲಭ್ಯವನ್ನು ಮುಂದಿನ ವರ್ಷ ನೋಂದಣಿಯಾಗುವವರೆಗೆ ಪಡೆಯಬಹುದು, ನಂತರದಲ್ಲಿ ಮಗುವಿನ ಹೆಸರನ್ನು ನೋಂದಾಯಿಸಿಕೊಂಡು ಯೋಜನೆಯ ಸೌಲಭ್ಯಪಡೆಯಬಹುದು.

9. ಮೇಲೆ ವಿವರಿಸಿರುವಂತೆ ಅರ್ಹ ಸದಸ್ಯರನ್ನು ಹೊರತುಪಡಿಸಿ ಬೇರೆ ಯಾವುದೇ ಸದಸ್ಯರನ್ನು ಯಶಸ್ವಿನಿ ಯೋಜನೆಗೆ ಸೇರಿಸುವಂತಿಲ್ಲ. ಒಂದು ವೇಳೆ ಸುಳ್ಳು ಮಾಹಿತಿ ನೀಡಿ ಅಕ್ರಮವಾಗಿ ಅರ್ಜಿದಾರ ಅಥವಾ ಸಹಕಾರ ಸಂಘದ ಮುಖ್ಯಕಾರ್ಯನಿರ್ವಹಣಾಧಿಕಾರಿಯ ತಪ್ಪಿನಿಂದಾಗಲಿ ಅರ್ಹರಲ್ಲದ ಸದಸ್ಯರಿಂದ ವಂತಿಗೆ ಪಾವತಿಸಿಕೊಂಡು ಅಂತಹ ವ್ಯಕ್ತಿಗಳನ್ನು ಗೊತ್ತಿದ್ದೋ ಅಥವಾ ಗೊತ್ತಿಲ್ಲದೆಯೋ ನೋಂದಣಿ ಮಾಡಿದ್ದರೂ ಸಹ ಅಂತಹ ವ್ಯಕ್ತಿಗಳು ಯೋಜನೆಯ ಸೌಲಭ್ಯ ಪಡೆಯಲು ಅರ್ಹರಾಗುವುದಿಲ್ಲ ಹಾಗೂ ಅಂತಹ ವ್ಯಕ್ತಿಗಳು ಪಾವತಿಸಿದ ವಂತಿಗೆ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಮತ್ತು ಅವರ ಯಶಸ್ವಿನಿ ಸದಸ್ಯತ್ವ ತಂತಾನೇ ರದ್ದುಗೊಳ್ಳುತ್ತದೆ. ಪ್ರತ್ಯೇಕ ರದ್ದತಿ ಆದೇಶ ಅವಶ್ಯಕತೆ ಇರುವುದಿಲ್ಲ.

10. 2023-24ನೇ ಸಾಲಿನಲ್ಲಿ ಕನಿಷ್ಟ 50.00 ಲಕ್ಷ ಸದಸ್ಯರನ್ನು ನೋಂದಾಯಿಸುವ ಗುರಿ ನಿಗದಿಪಡಿಸಲಾಗಿದೆ. ಪ್ರತಿ ಜಿಲ್ಲೆಯ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ನಿಬಂಧಕರು ಪ್ರತಿ ಜಿಲ್ಲೆಗೆ ಪ್ರತ್ಯೇಕ ಗುರಿ ನಿಗದಿಪಡಿಸುವಂತೆ ಸೂಚಿಸಲಾಗಿದೆ. 2022-23ನೇ ಸಾಲಿನಲ್ಲಿ 47.00 ಲಕ್ಷಕ್ಕೂ ಮೀರಿ ಸದಸ್ಯರನ್ನು ನೋಂದಾಯಿಸಿದ್ದು ಅವರೆಲ್ಲರನ್ನು 2023-24ನೇ ಸಾಲಿಗೆ ನೋಂದಾಯಿಸಲು ಕ್ರಮವಿಡತಕ್ಕದ್ದು.

11. ರಾಜ್ಯದಲ್ಲಿ ಕೆಲವು ಹಾಲು ಉತ್ಪಾದಕರ ಒಕ್ಕೂಟಗಳು, ಡಿಸಿಸಿ ಬ್ಯಾಂಕುಗಳು ಹಾಗೂ ಸಹಕಾರ ಸಂಘ/ಸಂಸ್ಥೆಗಳು ಅವುಗಳ ಸದಸ್ಯರ ವಾರ್ಷಿಕ ಯಶಸ್ವಿನಿ ವಂತಿಗೆಯಲ್ಲಿ ಭಾಗಶಃ ವಂತಿಗೆಯನ್ನು ಸಂಘದ ಸ್ವಂತ ಬಂಡವಾಳದಿಂದ ಭರಿಸುತ್ತಿವೆ. ಈ ಪದ್ಧತಿಯನ್ನು ರಾಜ್ಯದ ಎಲ್ಲಾ ಸಹಕಾರ ಸಂಘಗಳೂ ಕೂಡ ಅನುಸರಿಸುವಂತೆ ಪ್ರೋತ್ಸಾಹಿಸತಕ್ಕದು.

12. 2023–24ನೇ ಸಾಲಿಗೆ ಈ ಯೋಜನೆಯಡಿ

(ಎ) ಗ್ರಾಮೀಣ ಸಹಕಾರ ಸಂಘಗಳ/ಸ್ವ–ಸಹಾಯ ಗುಂಪುಗಳ ಗರಿಷ್ಠ ನಾಲ್ಕು ಸದಸ್ಯರ ಕುಟುಂಬ ಒಂದಕ್ಕೆ ವಾರ್ಷಿಕ ರೂ.500/–ಗಳ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಹೆಚ್ಚುವರಿ ಸದಸ್ಯರಿಗೆ ರೂ.100/– ಪಾವತಿಸತಕ್ಕದ್ದು.

(ಬಿ) ನಗರ ಸಹಕಾರ ಸಂಘಗಳ ಗರಿಷ್ಠ ನಾಲ್ಕು ಸದಸ್ಯರ ಕುಟುಂಬ ಒಂದಕ್ಕೆ ವಾರ್ಷಿಕ ರೂ.1000/–ಗಳ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಹೆಚ್ಚುವರಿ ಸದಸ್ಯರಿಗೆ ರೂ.200/–ಗಳನ್ನು ಪಾವತಿಸತಕ್ಕದ್ದು.

(ಸಿ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸದಸ್ಯರುಗಳಿಗೆ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ ಸಹಾಯ ಧನ ನೀಡುವ ಮೂಲಕ ಅವರ ವಾರ್ಷಿಕ ಸದಸ್ಯತ್ವದ ವಂತಿಕೆಯನ್ನು ಸರ್ಕಾರವೇ ಭರಿಸುತ್ತದೆ. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿವರಗಳನ್ನು ಕಡ್ಡಾಯವಾಗಿ ಸರ್ಕಾರಕ್ಕೆ ಸಲ್ಲಿಸಬೇಕಾಗಿರುವುದರಿಂದ ಈ ಸಮುದಾಯಗಳಿಗೆ ಸಂಬಂಧಿಸಿದಂತೆ ಜಾತಿ ಪ್ರಮಾಣ ಪತ್ರದಲ್ಲಿರುವ 80 ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು. ಇಲ್ಲದಿದ್ದಲ್ಲಿ ಸರ್ಕಾರದಿಂದ ಅನುದಾನ ಸೌಲಭ್ಯ ದೊರೆಯುವುದಿಲ್ಲ.

(ಡಿ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸದಸ್ಯರಿಂದ ಯಾವುದೇ ವಂತಿಗೆಯನ್ನು ಪಾವತಿಸಿಕೊಳ್ಳದಿರುವುದರಿಂದ ಈ ಸಮುದಾಯದ ಸದಸ್ಯರನ್ನು ಒಂದೇ ಬಾರಿ ಮೂರು ವರ್ಷಗಳ ಅವಧಿಗೆ ನೋಂದಾಯಿಸಿಕೊಂಡು ಅದರಂತೆ ಮೂರು ವರ್ಷಗಳ ಅವಧಿಗೆ ಕಾರ್ಡುಗಳನ್ನು ವಿತರಿಸಲಾಗುವುದು. ಸದರಿ ಕಾರ್ಡುಗಳಲ್ಲಿ ಯಾವುದೇ ತಿದ್ದುಪಡಿ/ಬದಲಾವಣೆ ಹಾಗೂ ಹೊಸ ಸದಸ್ಯರ ಸೇರ್ಪಡೆ/ತೆಗೆದು ಹಾಕುವುದು ಇದ್ದಲ್ಲಿ ಅದರಂತೆ ಪ್ರತಿ ವರ್ಷ ಕ್ರಮವಿಡಲಾಗುವುದು. ಪ್ರತಿ ವರ್ಷ ಆ ಸಮುದಾಯದ ಸದಸ್ಯರ ವಂತಿಗೆಯನ್ನು ಸರ್ಕಾರದಿಂದ ಕ್ಲೇಂ ಭರಿಸಲಾಗುವುದು.

(ಇ) ಸದಸ್ಯರಿಂದ ಸಂಗ್ರಹಿಸಿದ ವಂತಿಗೆ ಪೈಕಿ (ಸದಸ್ಯರಿಂದ ಇದಕ್ಕಾಗಿ ಹೆಚ್ಚುವರಿ ಮೊತ್ತ ಸಂಗ್ರಹಿಸತಕ್ಕದ್ದಲ್ಲ) ಪ್ರತಿ ಕಾರ್ಡಿಗೆ ರೂ.25/–ಗಳನ್ನು ಸಹಕಾರ ಸಂಘಗಳು ಪ್ರೋತ್ಸಾಹ ಧನವಾಗಿ ಇಟ್ಟುಕೊಂಡು ಉಳಿದ ಮೊತ್ತವನ್ನು ಸದಸ್ಯತ್ವ ನೋಂದಣಿಯಾದ ಏಳು (7) ದಿನಗಳೊಳಗಾಗಿ ಸಂಬಂಧಿಸಿದ ಜಿಲ್ಲಾ ಸಹಕಾರ ಬ್ಯಾಂಕುಗಳಲ್ಲಿ ಯಶಸ್ವಿನಿ ಟ್ರಸ್ಟ್ ಹೊಂದಿರುವ ಖಾತೆಗೆ ಜಮಾ ಮಾಡತಕ್ಕದ್ದು. ಜಿಲ್ಲಾ ಸಹಕಾರ ಬ್ಯಾಂಕುಗಳು ಜಮಾ ಆಗಿರುವ ವಂತಿಕೆ ಮೊತ್ತವನ್ನು ಸ್ವೀಕರಿಸಿದ ಏಳು (7) ದಿನಗಳೊಳಗಾಗಿ ಅಪೆಕ್ಸ್ ಬ್ಯಾಂಕಿನ ಕೇಂದ್ರ ಕಛೇರಿಯಲ್ಲಿ ಹೊಸದಾಗಿ ತೆರೆದಿರುವ ಯಶಸ್ವಿನಿ ಟ್ರಸ್ಟ್‌ನ ಉಳಿತಾಯ ಖಾತೆಗೆ ಜಮಾ ಮಾಡತಕ್ಕದ್ದು/ವರ್ಗಾಯಿಸತಕ್ಕದ್ದು.

(ಎಫ್) ವಿಳಂಬವಾದಲ್ಲಿ ಆ ಹಣವನ್ನು ಇಟ್ಟುಕೊಂಡ ಸಹಕಾರಿ ಸಂಘ/ಸಂಸ್ಥೆಯವರು ಬ್ಯಾಂಕಿಂಗ್ ನಿಯಮಗಳ ಪ್ರಕಾರ ಬಡ್ಡಿ ಪಾವತಿಮಾಡಲು ಬದ್ದರಾಗಿರುತ್ತಾರೆ. ಸದಸ್ಯರನ್ನು ನೋಂದಾಯಿಸಿರುವ ಸಹಕಾರ ಸಂಘ/ಬ್ಯಾಂಕುಗಳು ಸದಸ್ಯರಿಂದ ಸಂಗ್ರಹಿಸಿದ ವಂತಿಗೆಯನ್ನು ಆ ಜಿಲ್ಲೆಯ ಡಿಸಿಸಿ ಬ್ಯಾಂಕು ಮೂಲಕವೇ ಸಂದಾಯ ಮಾಡಬೇಕು. ಯಾವುದೇ ಕಾರಣಕ್ಕೆ ನೇರವಾಗಿ ಅಪೆಕ್ಸ್ ಬ್ಯಾಂಕಿನಲ್ಲಿರುವ ಟ್ರಸ್ಟ್ ಖಾತೆಗೆ ಪಾವತಿಸತಕ್ಕದಲ್ಲ.

13. 2023–24ನೇ ಸಾಲಿಗೆ ನೋಂದಣಿ ದಿನಾಂಕ: 01–12–2023 ರಿಂದ ಪ್ರಾರಂಭವಾಗಲಿದ್ದು ದಿನಾಂಕ: 31–01–2024 ರವರೆಗೆ ಮುಂದುವರೆಯಲಿದೆ.

14. 2022–23ನೇ ಸಾಲಿನಲ್ಲಿ ಯೋಜನೆಯ ಪ್ರಾರಂಭಿಕ ವರ್ಷವಾಗಿದ್ದರಿಂದ ಯಶಸ್ವಿನಿ ಚಿಕಿತ್ಸಾ ಅವಧಿ ಕ್ಯಾಲೆಂಡರ್ ವರ್ಷ ಜನವರಿ 2023 ರಿಂದ ಡಿಸೆಂಬರ್ 2023 ರವರೆಗೆ ನಿಗದಿಗೊಳಿಸಲಾಗಿತ್ತು. ಇದು ಲೆಕ್ಕಪತ್ರಗಳ ನಿರ್ವಹಣೆ, ಆಡಿಟ್ ನಿರ್ವಹಣೆ ಹಾಗೂ ಬ್ಯಾಂಕಿನ ವ್ಯವಹಾರ ಇತ್ಯಾದಿ ಆರ್ಥಿಕ ಸಂಬಂಧಿತ ವಿಷಯಗಳಿಗೆ ಸಂಬಂಧಿಸಿದಂತೆ ತಾಂತ್ರಿಕ ಸಮಸ್ಯೆಗಳು ಎದುರಾಗಿದ್ದು, ಇದರಿಂದಾಗಿ ಈಗಿರುವ ಚಿಕಿತ್ಸಾ ಅವಧಿಯನ್ನು ಡಿಸೆಂಬರ್ 2023 ಕ್ಕೆ ಬದಲಾಗಿ ಮಾರ್ಚ್–2024 ರವರೆಗೆ ವಿಸ್ತರಿಸಿದೆ. 2023–24ನೇ ಸಾಲಿನಲ್ಲಿ ಚಿಕಿತ್ಸಾ ಅವಧಿಯನ್ನು ಏಪ್ರಿಲ್–2024 ರಿಂದ ಮಾರ್ಚ್–2025 ರವರೆಗೆ ನಿಗದಿಗೊಳಿಸಿದೆ.

15. ಯಶಸ್ವಿನಿ ಯೋಜನೆಯಡಿ ಸದಸ್ಯರಿಗೆ ಯೂನಿಕ್ ಐಡಿ ಸಂಖ್ಯೆಯುಳ್ಳ ಪ್ಲಾಸ್ಟಿಕ್ ಕಾರ್ಡ್ ಒದಗಿಸಲಾಗುವುದು. ಸದರಿ ಕಾರ್ಡ್ ಹಾಜರುಪಡಿಸಿ ಫಲಾನುಭವಿಗಳು ನಗದುರಹಿತ ಚಿಕಿತ್ಸೆಗಳನ್ನು ಪಡೆಯಬಹುದಾಗಿದೆ. ಗುರುತಿನ ಚೀಟಿಯನ್ನು ಚಿಕಿತ್ಸೆಗಾಗಿ ನೆಟ್‌ವರ್ಕ್ ಆಸ್ಪತ್ರೆಗಳಿಗೆ ಭೇಟಿ ನೀಡಿದ ಸಮಯದಲ್ಲಿ ಫಲಾನುಭವಿಗಳು ಕಡ್ಡಾಯವಾಗಿ ಹಾಜರುಪಡಿಸಬೇಕು. ಇಲ್ಲದಿದ್ದಲ್ಲಿ ಆಸ್ಪತ್ರೆಗಳು ಯಶಸ್ವಿನಿ ಯೋಜನೆಯಡಿ ಚಿಕಿತ್ಸೆಯನ್ನು ನಿರಾಕರಿಸುತ್ತವೆ. ಇದಕ್ಕೆ ಟ್ರಸ್ಟ್ ಜವಾಬ್ದಾರಿಯಾಗುವುದಿಲ್ಲ.

16. ಯಶಸ್ವಿನಿ ಕಾರ್ಡನ್ನು ಫಲಾನುಭವಿಗಳು ಜೋಪಾನವಾಗಿ ಇಟ್ಟುಕೊಳ್ಳತಕ್ಕದು. ಒಂದು ವೇಳೆ ಕಾರ್ಡ್ ಕಳೆದು ಕೊಂಡಲ್ಲಿ ರೂ.250/–ಗಳ ಶುಲ್ಕವನ್ನು ಟ್ರಸ್ಟ್‌ಗೆ ಪಾವತಿಸಿ ಜಿಲ್ಲೆಯ ಉಪ ನಿಬಂಧಕರ ಮೂಲಕ ಟ್ರಸ್ಟ್‌ಗೆ ಮನವಿ ಸಲ್ಲಿಸಿ ಡೂಪ್ಲಿಕೇಟ್ ಕಾರ್ಡನ್ನು ಪಡೆಯಬಹುದು. ಡೂಪ್ಲಿಕೇಟ್ ಕಾರ್ಡ್ ವಿತರಣೆಯಾದ ನಂತರ ಹಳೆಯ ಕಾರ್ಡ್‌ನ್ನು ಸ್ಥಗಿತಗೊಳಿಸಲಾಗುವುದು.

17. ಈ ಕೆಳಕಂಡ ಸೌಲಭ್ಯಗಳನ್ನು ಯಶಸ್ವಿನಿ ಸದಸ್ಯರಿಗೆ ಒದಗಿಸಲಾಗುವುದು.

ಎ) ಪ್ರಸ್ತುತ ಯಶಸ್ವಿನಿ ಯೋಜನೆಯಣಯಲ್ಲಿ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಲ್ಲಿನ ಚಿಕಿತ್ಸೆಗಳ ಪೈಕಿ ಯಶಸ್ವಿನಿ ಟ್ರಸ್ಟ ಗುರುತಿಸಿದ 1650 ಚಿಕಿತ್ಸೆಗಳು ಮತ್ತು 478 (8 ಚಿಕಿತ್ಸೆಗಳೂ ಸೇರಿ ಒಟ್ಟು 2128 ಚಿಕಿತ್ಸೆಗಳನ್ನು ಯಶಸ್ವಿನಿ ಯೋಜನೆಗೆ ಅಳವಡಿಸಿಕೊಳ್ಳಲಾಗಿದೆ.

ಬಿ) ರೋಗಿಗಳಿಗೆ ಸದರಿ ಚಿಕಿತ್ಸಾ ಸೌಲಭ್ಯಗಳನ್ನು ರಾಜ್ಯದಲ್ಲಿ ನೋಂದಾಯಿಸಿದ ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಒದಗಿಸಲಾಗುವುದು. ನೆಟ್‌ವರ್ಕ್ ಆಸ್ಪತ್ರೆಗಳಲ್ಲದೇ ಇತರೆ ಆಸ್ಪತ್ರೆಗಳಲ್ಲಿ ಯಶಸ್ವಿನಿ ಯೋಜನೆ ಸೇವೆ ಲಭ್ಯವಿರುವುದಿಲ್ಲ.

ಸಿ) ಯೋಜನೆಯಲ್ಲಿ ಒಳಪಡದ ಚಿಕಿತ್ಸೆಗಳ ಮತ್ತು ಟ್ರಸ್ಟ್ ಅಂಗೀಕರಿಸದ ಆಸ್ಪತ್ರೆಗಳಲ್ಲಿ ಪಡದಂತಹ ಚಿಕಿತ್ಸೆಗಳಿಗೆ ಯಶಸ್ವಿನಿ ಟ್ರಸ್ಟ್ ಜವಾಬ್ದಾರರಾಗುವುದಿಲ್ಲ ಹಾಗೂ ಯಾವುದೇ ಕಾರಣಕ್ಕೂ ಆಸ್ಪತ್ರೆಗಳಿಗಾಗಲಿ ಅಥವಾ ಫಲಾನುಭವಿಗಳಿಗಾಗಲಿ ಚಿಕಿತ್ಸಾ ವೆಚ್ಚವನ್ನು ಪಾವತಿಸಲಾಗುವುದಿಲ್ಲ.

ಡಿ) ಎರಡು ಜೀವಂತ ಮಕ್ಕಳು ಅಥವಾ ಎರಡು ಹೆರಿಗೆಗೆ ಮಾತ್ರ ಯಶಸ್ವಿನಿ ಯೋಜನೆಯಲ್ಲಿ ಸೌಲಭ್ಯ ದೊರೆಯುತ್ತದೆ.

ಇ) ಯಶಸ್ವಿನಿ ಯೋಜನೆಯ ಪ್ರೋಟೋಕಾಲ್ ಪ್ರಕಾರ ಯಶಸ್ವಿನಿ ಫಲಾನುಭವಿಗಳು ಜನರಲ್ ವಾರ್ಡ್‌ನಲ್ಲಿ ಮಾತ್ರ ಚಿಕಿತ್ಸೆ ಪಡೆಯಲು ಅರ್ಹರಿರುತ್ತಾರೆ. ಒಂದು ವೇಳೆ ಯೋಜನೆಯಡಿ ನಿಗದಿಪಡಿಸಿರುವ ಜನರಲ್ ವಾರ್ಡ್‌ಗೆ ಬದಲಾಗಿ ಉನ್ನತ ವಾರ್ಡ್ (Semi Special Ward or Special Ward) ನಲ್ಲಿ ಚಿಕಿತ್ಸೆ ಪಡೆಯಲು ಇಚ್ಛಿಸಿದಲ್ಲಿ, ಸದರಿ ಫಲಾನುಭವಿಗಳಿಗೆ ಯೋಜನೆಯಡಿ ನಿಗದಿಪಡಿಸಿರುವಂತೆ ಜನರಲ್ ವಾರ್ಡ್‌ಗೆ ಅನ್ವಯಿಸುವ ಚಿಕಿತ್ಸೆಯ ವೆಚ್ಚವನ್ನು ಮಾತ್ರ ಭರಿಸಲಾಗುವುದು. ಉನ್ನತ ವಾರ್ಡ್/ಸ್ಪೆಷಲ್ ವಾರ್ಡ್‌ಗೆ ಆಗುವ ಹೆಚ್ಚುವರಿ ವ್ಯತ್ಯಾಸದ ಚಿಕಿತ್ಸಾ ಮೊತ್ತವನ್ನು ಸದರಿ ಫಲಾನುಭವಿಗಳೇ ಭರಿಸತಕ್ಕದ್ದು.

ಎಫ್) ಯಶಸ್ವಿನಿ ಯೋಜನೆಯ ಪ್ಯಾಕೇಜಿನಲ್ಲಿ Implants ಅಗತ್ಯವಿರುವ ಕಡೆ Implants ದರವನ್ನು ಒಳಗೊಂಡಿರುತ್ತದೆ. (Ex Knee replacement lense in cataract surgery) ಒಂದು ವೇಳೆ ಫಲಾನುಭವಿಗಳು ಉನ್ನತ Implants CxÀªÁ lense ಪಡೆಯಲು ಸ್ವ-ಇಚ್ಛೆಯಿಂದ ಒಪ್ಪಿಗೆ ಸೂಚಿಸಿದಲ್ಲಿ, ಅಂತಹ ಉನ್ನತ Implants ಮತ್ತು lenseಗೆ ತಗಲುವ ವ್ಯತ್ಯಾಸದ ಹೆಚ್ಚುವರಿ ಮೊತ್ತವನ್ನು ಅಂತಹ ಫಲಾನುಭವಿಗಳೇ ಭರಿಸಿ ಚಿಕಿತ್ಸೆಯನ್ನು ಪಡೆಯತಕ್ಕದ್ದು.

ಜಿ) ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಯಶಸ್ವಿನಿ ಸದಸ್ಯರಿಗೆ ಹೊರ ರೋಗಿ ಚಿಕಿತ್ಸೆಗೆ (OPD) ಗರಿಷ್ಠ ರೂ.200/-ಗಳನ್ನು (ಮೂರು ತಿಂಗಳ ಅವಧಿಗೆ) ಮಿತಿ ನಿಗಧಿಪಡಿಸಿದ್ದು, ಈ ಪೈಕಿ ರೂ.100/-ಗಳನ್ನು ಯಶಸ್ವಿನಿ ಟ್ರಸ್ಟ್ ವತಿಯಿಂದ ಪಾವತಿಸಲಾಗುವುದು.

ಹೆಚ್) ಕಾರ್ಡ್ ಪಡೆದ ಹದಿನೈದು (15) ದಿನಗಳ ನಂತರ ಯಶಸ್ವಿನಿ ಕಾರ್ಡುದಾರರು ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಅರ್ಹರಾಗಿರುತ್ತಾರೆ.

18. ಸದಸ್ಯರ ನೋಂದಣಿಗೆ ಮಾರ್ಗಸೂಚಿಗಳು, ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಗಳ ಯಾದಿ, ಶಸ್ತ್ರಚಿಕಿತ್ಸೆಗಳ ಯಾದಿ, ಇವುಗಳನ್ನು ಸಹಕಾರ ಇಲಾಖೆಯ ಸಹಕಾರ ಸಿಂಧು ವೆಬ್‌ಸೈಟ್‌ನಲ್ಲಿ/ಟ್ರಸ್ಟ್ ವೆಬ್‌ಸೈಟ್‌ನಲ್ಲೂ ಅಪ್‌ಲೋಡ್ ಮಾಡಲಾಗುವುದು.

19. ಸದಸ್ಯರು ಕಡ್ಡಾಯವಾಗಿ ಮೊಬೈಲ್ ಸಂಖ್ಯೆ ಮತ್ತು ಆಧಾರ್ ಕಾರ್ಡ್ ಒದಗಿಸತಕ್ಕದು.

20. ಯಶಸ್ವಿನಿ ಯೋಜನೆಯ ಮಾರ್ಗಸೂಚಿಗಳ ಬಗ್ಗೆ ತಿಳುವಳಿಕೆ ನೀಡಲು ಆಯಾ ಪ್ರಾಂತ್ಯದ ಸಹಕಾರ ಸಂಘಗಳ ಜಂಟಿ ನಿಬಂಧಕರು ಅವರ ವ್ಯಾಪ್ತಿಯ ಇಲಾಖಾಧಿಕಾರಿಗಳ, ಜಿಲ್ಲಾ ಸಹಕಾರ ಬ್ಯಾಂಕುಗಳ, ಹಾಲು ಉತ್ಪಾದಕರ ಸಂಘಗಳ ಒಕ್ಕೂಟಗಳ ಮತ್ತು ಇತರೆ ಪ್ರಮುಖ ಸಹಕಾರ ಸಂಘ/ಸಂಸ್ಥೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯನ್ನು ಪ್ರಾಂತೀಯ ಮಟ್ಟದಲ್ಲಿ ನಿರ್ವಹಿಸಲು ಸೂಚಿಸಿದೆ. ನಂತರ ಎಲ್ಲಾ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರು, ಅವರ ಜಿಲ್ಲೆಯ ಸಹಕಾರ ಸಂಘಗಳ ಅಧ್ಯಕ್ಷರ, ಮುಖ್ಯಕಾರ್ಯನಿರ್ವಹಣಾಧಿಕಾರಿ ರವರ ಮತ್ತು ಸಂಬಂಧಿಸಿದ ಇಲಾಖಾಧಿಕಾರಿಗಳ ಸಭೆ ಕರೆದು ಕಾರ್ಯಗಾರ ಏರ್ಪಡಿಸಿ ಯೋಜನೆಯ ಮಾರ್ಗಸೂಚಿ ನಿಯಮಗಳು, ಇತಿಮಿತಿಗಳು ಮತ್ತು ಯೋಜನೆಯಡಿ ಸೌಲಭ್ಯದ ವಿವರಗಳ ಮಾಹಿತಿ ನೀಡಿ, ತೆಗೆದುಕೊಂಡ ಕ್ರಮದ ಬಗ್ಗೆ ವರದಿಯನ್ನು ನಿಬಂಧಕರಿಗೆ ಮತ್ತು ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 113 ವೆಚ್ಚ-2/2022, ದಿನಾಂಕ: 26-10-2023 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ**

**ಸಹಿ/-**

**ಎ.ಸಿ. ದಿವಾಕರ್**

**ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ**

**ಸರ್ಕಾರದ ಜಂಟಿ ಕಾರ್ಯದರ್ಶಿ**

**ಸಹಕಾರ ಇಲಾಖೆ.**

# ಶಿಕ್ಷಕ ವೃಂದದ ಆರ್ಥಿಕ ಪ್ರಗತಿಯ ಪ್ರೇರಕ - ಪೋಷಕ ಪ್ರಗತಿಯಲ್ಲಿ ಶಿಕಾರಿಪುರ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಪತ್ತಿನ ಸಹಕಾರ ಸಂಘ ನಿ.,

ಸಹಕಾರ ಚಳವಳಿ ನಿಂತ ನೀರಲ್ಲ. ಸದಾ ಹರಿವ ನೀರಿನಂತೆ ಚಳವಳಿಯು ಸೇವಾ ಮನೋಭಾವನೆ ಹಾಗೂ ಕ್ರೀಯಾಶೀಲವಾಗಿರಬೇಕು. ಏಕೆಂದರೆ, ಚಳವಳಿ ಜನರ ಆಂದೋಲನ. ಹಲವು ದಶಕಗಳ ಹಿಂದೆ ಸಹಕಾರ ಚಳವಳಿ ರೈತರ ಚಳವಳಿ ಎಂಬ ಭಾವನೆ ಇದ್ದುದುಂಟು. ಆದರೆ, ದಿನಗಳು ಉರುಳಿದಂತೆ ಸಹಕಾರ ಕ್ಷೇತ್ರ ಜೀವನದ ಎಲ್ಲಾ ಆಯಾಮಗಳನ್ನು ಆವರಿಸಿಕೊಂಡು ಬದುಕಿನ ಅವಿಭಾಜ್ಯ ಅಂಗವಾಗಿಯೇ ಗುರುತಿಸಿಕೊಂಡಿದೆ. ಅಭಿವೃದ್ಧಿ ಹೊಂದಿದ ರಾಷ್ಟ್ರಗಳಿಂದ ಹಿಡಿದು ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರಗಳಲ್ಲಿಯೂ ಸಹ ಸಹಕಾರ ತತ್ವ ಆದರ್ಶಗಳನ್ನು ಜನರು ಬೆಂಬಲಿಸುತ್ತಿದ್ದಾರೆ. ಜಾಗತಿಕ ಉದ್ದಿಮೆಗಳು ಸಹ ಇಂದು ಸಹಕಾರ ತತ್ವದಲ್ಲಿ ನಂಬಿಕೆ ಇರಿಸಿ ಮಾತನಾಡುತ್ತಿರುವುದನ್ನು ನಾವೂ ನೋಡುತ್ತಿದ್ದೇವೆ.

ನಗರ ಪ್ರದೇಶದ ಅಬಲವರ್ಗದವರ ಹಾಗೂ ಆರ್ಥಿಕ ನೆರವು ಪಡೆಯಬಯಸುವ ಜನರ ಆರ್ಥಿಕ ಸೌಲಭ್ಯಗಳ ಪೂರೈಕೆಯಲ್ಲಿ ಪತ್ತಿನ ಸಹಕಾರ ಸಂಘಗಳು ಬಹಳ ಮಹತ್ವದ ಪಾತ್ರವನ್ನು ನಿರ್ವಹಿಸಿಕೊಂಡು ಬರುತ್ತಿವೆ. ಸಾರ್ವಜನಿಕರ ಹಿತಾಸಕ್ತಿಗಾಗಿ ಅವರ ಆರ್ಥಿಕ ಸ್ವಾವಲಂಬನೆಯ ಯಶಸ್ಸಿನೊಂದಿಗೆ ಸಮಾಜದ ಪ್ರಗತಿಯೂ ಸಹ ಈ ಸಂಸ್ಥೆಗಳ ಉದ್ದೇಶವಾಗಿದೆ. ಆರ್ಥಿಕ ಸಬಲೀಕರಣದ ಮೂಲಕ ಆರ್ಥಿಕ ಮತ್ತು ಸಾಮಾಜಿಕ ಪರಿವರ್ತನೆ ಮಾಡುವುದು ಸಹಕಾರದ ಮೂಲೋದ್ದೇಶ. ಇದು ಪ್ರಜಾಪ್ರಭುತ್ವದ ಪರಿವರ್ತನೆಗೆ ಪೂರಕ ಅನಿಸಿದೆ. ಇದರಿಂದ ಸಾರ್ವಜನಿಕ ವಲಯ ಮತ್ತು ಖಾಸಗಿ ಕ್ಷೇತ್ರ ಹಾಗೂ ಸಹಕಾರಿ ಕ್ಷೇತ್ರದ ಪೈಪೋಟಿಯನ್ನು ಎದುರಿಸಲು ಸಾಧ್ಯವಾಗುತ್ತದೆ ಹಾಗೂ ಅತಿ ಸಣ್ಣ ಹಿಡುವಳಿದಾರರು, ಸಣ್ಣ ವ್ಯಾಪಾರಿಗಳು, ಚಿಲ್ಲರೆ ಮಾರಾಟಗಾರರು, ನೌಕರ ವರ್ಗದವರು ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ, ಔದ್ಯೋಗಿಕವಾಗಿ ಮುಂದುವರೆಯಲು ಈ ಪತ್ತಿನ ಸಹಕಾರ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ.

ಸಹಕಾರ ಸಂಸ್ಥೆಗಳ ಸಾಲಿನಲ್ಲಿ ಶಿಕಾರಿಪುರ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಪತ್ತಿನ ಸಹಕಾರ ಸಂಘವು ಒಂದಾಗಿದೆ. ಪ್ರಾಥಮಿಕ ಶಾಲಾ ಶಿಕ್ಷಕರ ಆರ್ಥಿಕ ಸ್ವಾವಲಂಬನೆಗೆ ಪೂರಕವಾಗಿ ಕಾರ್ಯನಿರ್ವಹಿಸುವುದರೊಂದಿಗೆ ವರ್ಷದಿಂದ ವರ್ಷಕ್ಕೆ ಪ್ರಗತಿಯ ಪತ್ರದಲ್ಲಿ ಸಾಗುತ್ತಿದೆ. ಈ ಸಹಕಾರ ಸಂಘವು ಶಿಕಾರಿಪುರ ತಾಲೂಕಿನ ಸರ್ಕಾರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೃತ್ತಿ ನಿರತ ಶಿಕ್ಷಕರನ್ನು ಸದಸ್ಯರನ್ನಾಗಿ ಮಾಡಿಕೊಂಡು 1976 ರಲ್ಲಿ ನೋಂದಣಿಯಾಗಿರುತ್ತದೆ. ಸಂಘವು ಸದಸ್ಯರಿಗೆ ವೇತನಾಧಾರಿತ ಸಾಲವನ್ನು ನೀಡುತ್ತಾ ಆರ್ಥಿಕವಾಗಿ ಶಿಕ್ಷಕರು ಸಧೃಢವಾಗಲು ಕಾರ್ಯಪ್ರವೃತ್ತವಾಗಿದೆ.

2016 ರಿಂದ ಶ್ರೀಯುತ ಆರ್ ಎಂ ಘಾಸಿ ಇವರ ಅಧ್ಯಕ್ಷತೆಯಲ್ಲಿರುವ ಆಡಳಿತ ಮಂಡಳಿಯು ತುಂಬಾ ಬದ್ಧತೆಯಿಂದ ಕಾರ್ಯನಿರ್ವಹಿಸಿ ಪ್ರತಿಯೊಬ್ಬ ಸದಸ್ಯರಿಗೂ ಸಂಘದ ಸೌಲಭ್ಯವನ್ನು ದೊರೆಯುವಂತೆ ಮಾಡುತ್ತದೆ. ಆಡಳಿತ ಮಂಡಳಿಯು ಸಂಘವು "ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳ್ವೆ" ಎಂಬ ಧ್ಯೆಯದೊಂದಿಗೆ ಸಹಕಾರದಿಂದ ಸಮೃದ್ಧಿ, ಉಳಿತಾಯದಿಂದ ಅಭಿವೃದ್ಧಿ ಎಂಬ ಅಂಶವನ್ನು ಪ್ರತಿಯೊಬ್ಬ ಸಹಕಾರಿ ಶಿಕ್ಷಕರಿಗೂ ಕೂಡಿಟ್ಟ ಹಣ ನಾಳಿನ ಆಪತ್ತಿಗೆ ಬಂದೀತ ಎಂಬ ಆಶಾ ಭಾವನೆಯಿಂದ ಶಿಕ್ಷಕರು ಈ ಸಹಕಾರ ಸಂಘದಲ್ಲಿ ತೊಡಗಿಸಿದ ಹಣವನ್ನು ರಕ್ಷಿಸುತ್ತಾ ಅಭಿವೃದ್ಧಿ ಪತದತ್ತಾ ಸಾಗಿಸುತ್ತ ಲಾಭಗಳಿಕೆಯಲ್ಲಿ ಉತ್ತಮ ಸಾಧನೆ ಮಾಡುತ್ತಿದೆ.




ಸಂಘದ ಪ್ರತಿಯೊಂದು ವ್ಯವಹಾರವು ನಗದು ರಹಿತವಾಗಿ ನಡೆಸಲಾಗುತ್ತಿದ್ದು, ಸದಸ್ಯರಾದ ಶಿಕ್ಷಕರಿಗೆ 75000/– ರೂ.ಗಳನ್ನು ಸಾಲ ನೀಡುತ್ತಿದೆ, ಈಗ ಶಿಕ್ಷಕರಿಗೆ ವೇತನದ ಆಧಾರದಲ್ಲಿ 10.00.000/– ರೂ.ಗಳ ವರೆಗೆ ಸಾಲವನ್ನು ನೀಡಿ ಶಿಕ್ಷಕರ ಆರ್ಥಿಕ ಅಭಿವೃದ್ಧಿಗೆ ಸಹಕಾರಿಯಾಗಿದೆ. ಪ್ರತಿಷೇರಿಗೆ 2000/– ರೂ. ಆಗಿದ್ದು ವರದಿ ಸಾಲಿನ ವರೆಗೆ 742 ಜನ ಸಂಘದಲ್ಲಿ ಸದಸ್ಯರಿರುತ್ತಾರೆ. ಸಂಘದ ಸದರಿ ಆಡಳಿತ ಮಂಡಳಿಯೂ ಪ್ರತಿ ವರ್ಷವು ನಡೆಯುವ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಭಾಗವಹಿಸುವ ಸದಸ್ಯರಿಗೆ ಉತ್ತಮ ಗುಣಮಟ್ಟದ ಯೋಗ್ಯಕರವಾದಂತಹ ಗೃಹ ಉಪಯೋಗಿ ವಸ್ತುವನ್ನು ಕೊಡುಗೆಯಾಗಿ ನೀಡುತ್ತಾ ಬಂದಿದೆ. 2022 ರಲ್ಲಿ ಸದಸ್ಯ ಶಿಕ್ಷಕರ ಷೇರುದಾರರಿಗೆ ಅನುಕೂಲಕ್ಕಾಗಿ ಶಿರಾಳಕೊಪ್ಪ ಪಟ್ಟಣದ ಗುರುಭವನದಲ್ಲಿ ಶಾಖೆಯನ್ನು ತೆರೆದು ಉಡುಗಣಿ & ತಾಳಗುಂದ ಹೊಬಳಿಯ ಷೇರುದಾರ ಸದಸ್ಯರೂ ಎಲ್ಲಾ ವ್ಯವಹಾರವನ್ನು ಅಲ್ಲೇ ನಡೆಸಲು ಪ್ರಾರಂಭಿಸಲಾಗಿದೆ. 2022–23ನೇ ಸಾಲಿನ ಆರ್ಥಿಕ

ವರ್ಷದಲ್ಲಿ ಸಂಘವು 33,09,26,647.70 ರೂ.ಗಳ ವ್ಯವಹಾರ ನಡೆಸಿದೆ. ವರದಿ ಸಾಲಿನಲ್ಲಿ ಸದಸ್ಯರ ಠೇವಣಿಗಳ ಮೇಲೆ ಬಡ್ಡಿ ನೀಡಲು 38,00,000/– ರೂ.ಗಳು ಕರಡು ಸಾಲ ನಿಧಿಗೆ 5,00,000/– ರೂ.ಗಳನ್ನು ಅನುವು ಮಾಡಿ ಕಾಯ್ದಿರಿಸಿಕೊಂಡು 2022–23 ನೇ ಸಾಲಿಗೆ 24,29,225.88 ರೂ.ಗಳ ಲಾಭಗಳಿಸಿದೆ. ಹೀಗೆ, ಸಂಘವು ಪ್ರತಿ ವರ್ಷ ಲಾಭ ಗಳಿಸುತ್ತಾ ಬಂದಿದ್ದು, ಪ್ರತಿ ವರ್ಷ ಷೇರುದಾರರಿಗೆ ಲಾಭಾಂಶವನ್ನು ಷೇರುದಾರ ಸದಸ್ಯರ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತಿದೆ. ಸಂಘದ ಅಧ್ಯಕ್ಷರಾದ ಆರ್.ಎಂ. ಫಾಸಿಯವರ ಅಧ್ಯಕ್ಷರು ಹಾಗೂ ಆಡಳಿತ ಮಂಡಳಿಯ ನಿರ್ದೇಶಕರ ಹಾಗೂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶ್ರೀಗದ್ದಿಗಪ್ಪ ಸಾಹುಕಾರ ಇವರ ಸಹಕಾರದಿಂದ ಸಂಘವು ಪ್ರಗತಿ ಹೊಂದಲು ಸಹಕಾರಿಯಾಗಿದೆ.

### ಸಂಘದ ಪ್ರಮುಖ ಕಾರ್ಯಚಟುವಟಿಕೆಗಳು

- ಸಂಘದ ಎಲ್ಲಾ ವ್ಯವಹಾರವು ನಗದು ರಹಿತ ಹಾಗೂ ಪಾರದರ್ಶಕ ಆಡಳಿತ ವ್ಯವಸ್ಥೆ
- ಸಾಲ ನೀಡಿಕೆ & ಠೇವಣಿ ಮರುಪಾವತಿಯಲ್ಲಿ ಪಾರದರ್ಶಕ ವ್ಯವಸ್ಥೆ
- ಆಡಳಿತಾತ್ಮಕ ವೆಚ್ಚಗಳ ಕಡಿತ
- ಷೇರುದಾರ ಸದಸ್ಯರ ಮಕ್ಕಳಿಗೆ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಯಲ್ಲಿ ಶೇ. 90% ಹೆಚ್ಚು ಅಂಕ ಪಡೆದ
- ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ.
- ಪ್ರತಿ ವರ್ಷ ನಡೆಯುವ ಶಿಕ್ಷಕರ ದಿನಾಚರಣೆಗೆ ಸನ್ಮಾನ ಮತ್ತು ಕಾರ್ಯಕ್ರಮದ ಉಸ್ತುವಾರಿಗೆ ಕೊಡುಗೆ
- ತಾಲ್ಲೂಕು ಕ್ರೀಡಾ ಕೂಟಕ್ಕೆ ಆರ್ಥಿಕ ಪ್ರೋತ್ಸಾಹ

| ಸಂಘದ ಪ್ರಗತಿಯ ಅಂಕಿ–ಅಂಶ (ರೂ.ಗಳಲ್ಲಿ) | | | |
|---|---|---|---|
| ವಿವರ | 2020–21 | 2021–22 | 2022–23 |
| ಷೇರುದಾರರ ಸಂಖ್ಯೆ | 750 | 743 | 742 |
| ಷೇರು ಬಂಡವಾಳ | 14163503 | 13701844 | 14797311 |
| ಆವರ್ತಕ ನಿಧಿ | 1107464 | 1369310 | 880075 |
| ನಿರಂತರ ನಿಧಿ | 9057781 | 11857181 | 14300265 |
| ಮುದ್ದತ್ತು ಠೇವಣಿ | 37807907 | 46966447 | 48438037 |
| ದುಡಿಯುವ ಬಂಡವಾಳ | 89812957.24 | 77180589.41 | 101336408.80 |
| ನಿವ್ವಳ ಲಾಭ | 2725113.87 | 2423196.10 | 3429252.88 |
| ಆಡಿಟ್ ವರ್ಗ | ಬಿ | ಬಿ | ಬಿ |
| ಲಾಭಾಂಶ ಹಂಚಿಕೆ | ಶೇಕಡಾ 8 | ಶೇಕಡಾ 8 | ಶೇಕಡಾ 8 |

- ನಿವೃತ್ತರಾದ ಶಿಕ್ಷಕರಿಗೆ ಸರ್ವ ಸದಸ್ಯರ ಸಭೆಯಲ್ಲಿ ಸನ್ಮಾನ.
- ಸೇವೆಯಲ್ಲಿದ್ದು ಮರಣ ಹೊಂದಿದ ಷೇರುದಾರ ಸದಸ್ಯರ ವಾರಸುದಾರರಿಗೆ ಮರಣ ಪರಿಹಾರ ನಿಧಿಯಿಂದ ಶವಸಂಸ್ಕಾರಕ್ಕೆ 20.000/– ರೂಗಳನ್ನು ನೀಡಲಾಗುತ್ತಿದೆ.
- ಪ್ರತಿ ವರ್ಷ ಷೇರುದಾರರಿಗೆ ಶೇ.8ರಷ್ಟು ಡಿವಿಡೆಂಡ್ ನೀಡಲಾಗುತ್ತಿದೆ.
- ಷೇರುದಾರ ಸದಸ್ಯರಿಗೆ ವೇತನಾ ಆಧಾರಿತ ಸಾಲವನ್ನು ಶೇ. 13 ರಂತೆ ಬಡ್ಡಿ ನೀಡಲಾಗುತ್ತಿದೆ.
- ಸದಸ್ಯರಿಗೆ ವೇತನ ಆಧಾರದ ಮೇಲೆ ರೂ. 1000000 ಸಾಲ ನೀಡಲಾಗುತ್ತಿದೆ.

## ಶಿಕಾರಿಪುರ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಪತ್ತಿನ ಸಹಕಾರ ಸಂಘ, ನಿ., ಶಿಕಾರಿಪುರ

### ಆಡಳಿತ ಮಂಡಳಿ ಸದಸ್ಯರು


ಬಿ.ಎಂ. ಫಾಸಿ
ಅಧ್ಯಕ್ಷರು


ಉಮೇಶಪ್ಪ ಯು.
ಉಪಾಧ್ಯಕ್ಷರು


ಗದ್ದಿಗಪ್ಪ ಸಾಹುಕಾರ್
ಮುಖ್ಯಕಾರ್ಯನಿರ್ವಹಣಾಧಿಕಾರಿ


ಹುತ್ತೇಶ ಕೆ.ಹೆಚ್.
ಗೌರವಾಧ್ಯಕ್ಷರು


ದೇವರಾಜ ವೈ.ಎಂ.
ಕಾರ್ಯಾಧ್ಯಕ್ಷರು


ಸುಭಾಷ್ ಹೆಚ್.ಎನ್.
ಖಜಾಂಚಿ


ಲಕ್ಷ್ಮವ್ವ ಎಂ. ಸುಣಗಾರ
ಲೆಕ್ಕಪರಿಶೋಧಕರು


ಶೇಖರನಾಯ್ಕ ಆರ್.
ಸಹ ಕಾರ್ಯದರ್ಶಿ


ಬೀರೇಶ್ವರ ಎಸ್.ಡಿ.
ಸಹಕಾರ್ಯದರ್ಶಿ


ಸೋಮಪ್ಪ ಎ.ಹೆಚ್.
ನಿರ್ದೇಶಕರು


ಹಾಲಪ್ಪ ಎ.ಕೆ.
ನಿರ್ದೇಶಕರು


ಕಸ್ತೂರವ್ವ ಎಸ್. ಮಾಳಾಪುರ
ನಿರ್ದೇಶಕರು


ಪರಶುರಾಮ ಎಂ.ಹೆಚ್.
ನಿರ್ದೇಶಕರು


ಲಿಂಗರಾಜನಾಯ್ಕ ಹೆಚ್.
ನಿರ್ದೇಶಕರು


ಚನ್ನೇಶಪ್ಪ ಕೆ.
ನಿರ್ದೇಶಕರು


ಆನಂದಪ್ಪ ವಿ.
ನಾಮ ನಿರ್ದೇಶಕರು


ಸುರೇಶ್ ಎಸ್. ಅರ್ಕಾಚಾರಿ
ನಾಮ ನಿರ್ದೇಶಕರು

ಲೇಖನ: ಯಶವಂತ ಕುಮಾರ್, ಮುಖ್ಯಕಾರ್ಯನಿರ್ವಣಾಧಿಕಾರಿ, ಶಿವಮೊಗ್ಗ ಜಿಲ್ಲಾ ಸಹಕಾರ ಯೂನಿಯನ್